# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ್, ಬಿ, ಗುಡಗೇನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

VOL.04 ISSUE. 298 ₹4, TUESDAY, 23 JANUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26


# 500 ವರ್ಷಗಳ ಕಾಯುವಿಕೆಗೆ ಹರುಷದ ಅಂತ್ಯ

## ಉದ್ಘಾಟನೆಗೊಂಡ ಅಯೋಧ್ಯೆ ರಾಮಮಂದಿರ | ರಾಮ ಲಲ್ಲಾ ವಿಗ್ರಹಕ್ಕೆ ಪ್ರಾಣಪ್ರತಿಷ್ಠಾಪನೆ



ಅಯೋಧ್ಯೆ: ಬರೊಬ್ಬರಿ 5 ಶತಮಾನಗಳ ಹೋರಾಟ ಮತ್ತು ದಶಕಗಳ ಕಾಯುವಿಕೆ ಕೊನೆಗೂ ಅಂತ್ಯವಾಗಿದ್ದು, ಅಯೋಧ್ಯೆ ರಾಮಮಂದಿರ ಕೊನೆಗೂ ಉದ್ಘಾಟನೆಯಾಗಿ, ರಾಮಲಲ್ಲಾ ವಿಗ್ರಹಕ್ಕೆ ಪ್ರಾಣಪ್ರತಿಷ್ಠಾಪನೆ ಮಾಡಲಾಗಿದೆ.


ಸುಮಾರು 496 ವರ್ಷಗಳಿಂದ ಭಾರತದ ಕೋಟ್ಯಂತರ ನಾಗರಿಕರು ಕಾಣುತ್ತಿದ್ದ ರಾಮಮಂದಿರದ ಕನಸು ನನಸಾಗಿದೆ. ರಾಮ ಜನ್ಮಭೂಮಿ ಅಯೋಧ್ಯೆಯಲ್ಲಿ ನಿರ್ಮಿಸಲಾಗಿರುವ ಭವ್ಯ ರಾಮಮಂದಿರದಲ್ಲಿ ರಾಮಲಲ್ಲಾನಿಗೆ ನೆರವೇರಿಸಲಾಗಿದೆ.

ಇದರೊಂದಿಗೆ ರಾಮಮಂದಿರವು ಉದ್ಘಾಟನೆಯಾದಂತಾಗಿದೆ.

ವಿಶೇಷ ಹೆಲಿಕಾಪ್ಟರ್‌ನಲ್ಲಿ ರಾಮಮಂದಿರಕ್ಕೆ ಆಗಮಿಸಿದ ಪ್ರಧಾನಿ ನರೇಂದ್ರ ಮೋದಿ ಅವರು ಬೆಳ್ಳಿಯ ಛತ್ರಿವನ್ನು ಹಿಡಿದುಕೊಂಡು ರಾಮಮಂದಿರ ಪ್ರವೇಶಿಸಿದರು. ಇದಾದ ಬಳಿಕ ಧಾರ್ಮಿಕ ವಿಧಿವಿಧಾನಗಳಲ್ಲಿ ಪಾಲ್ಗೊಂಡ ಅವರು, ಗರ್ಭಗುಡಿಯಲ್ಲಿ ಪ್ರಾಣ ಪ್ರತಿಷ್ಠಾಪನೆ ಕೈಂಕರ್ಯ ನೆರವೇರಿಸಿದರು.

ಪ್ರಧಾನಿ ನರೇಂದ್ರ ಮೋದಿಗೆ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ರಾಜ್ಯಪಾಲೆ ಆನಂದಿಬೆನ್ ಪಟೇಲ್, ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಹಾಗೂ ಶ್ರೀ ರಾಮಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ಅಧ್ಯಕ್ಷ ಮಹಾಂತ ನೃತ್ಯ ಗೋಪಾಲ್‌ದಾಸ್ ಅವರು ಸಾಥ್ ನೀಡಿ ರಾಮಲಲ್ಲಾನಿಗೆ ಪ್ರಾಣಪ್ರತಿಷ್ಠೆ ನೆರವೇರಿಸಿದರು.

ಇದರೊಂದಿಗೆ 2019ರಲ್ಲಿ ಸುಪ್ರೀಂ ಕೋರ್ಟ್ ನೀಡಿದ ಐತಿಹಾಸಿಕ ತೀರ್ಪಿನಂತೆ ರಾಮಮಂದಿರವನ್ನು ನಿರ್ಮಿಸಿ, ಲೋಕಾರ್ಪಣೆ ಮಾಡಿದಂತಾಗಿದೆ. ಸಾವಿರಾರು ಜನರ ಹೋರಾಟ, ಪ್ರಾಣ ತ್ಯಾಗ ಹಾಗೂ ಸುದೀರ್ಘ ಕಾನೂನು ಹೋರಾಟದ ಬಳಿಕ ರಾಮಮಂದಿರದ ಕನಸು ಸಾಕಾರಗೊಂಡಿದೆ. ಈಗ ರಾಮಮಂದಿರ ನಿರ್ಮಾಣದ ಕನಸು ನನಸಾಗಿದ್ದು, ಮುಂದಿನ ದಿನಗಳಲ್ಲಿ ರಾಮರಾಜ್ಯದ ಕನಸು ಕೂಡ ನನಸಾಗಲಿದ ಎಂಬುದು ದೇಶದ ಜನರ ಆಶಯವಾಗಿದೆ.



### ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾದ ಗಣ್ಯರು

ಬಾಲಿವುಡ್ ನಟರಾಜ್ ಅಮಿತಾಭ್ ಬಚ್ಚನ್, ರಣಬೀರ್ ಕಪೂರ್, ಆಲಿಯಾ ಭಟ್, ಆಯುಷ್ಮಾನ್ ಖುರಾನ, ಸ್ಯಾಂಡಲ್‌ವುಡ್ ನಟ ರಿಷಬ್ ಶೆಟ್ಟಿ, ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ, ಕ್ರಿಕೆಟ್ ದೇವರು ಸಚಿನ್ ತೆಂಡೂಲ್ಕರ್, ಮುಕೇಶ್ ಅಂಬಾನಿ ಕುಟುಂಬಸ್ಥರು, ಗಾಯಕರಾದ ಸೋನು ನಿಗಮ್, ತೆಲುಗು ನಟ ಚಿರಂಜೀವಿ, ಅವರ ಪುತ್ರ ರಾಮ್ ಚರಣ್ ತೇಜ್ ಸೇರಿ ಸುಮಾರು 7 ಸಾವಿರಕ್ಕೂ ಅಧಿಕ ಗಣ್ಯರು ರಾಮಲಲ್ಲಾ ಪ್ರಾಣಪ್ರತಿಷ್ಠಾಪನೆಗೆ ಸಾಕ್ಷಿಯಾದರು.

### ಅತಿಥಿ, ಗಣ್ಯರಿಗೆ, ಅಯೋಧ್ಯೆ ಕುರಿತ ಪುಸ್ತಕ, ಲೋಹದ ಹಣತೆ ಉಡುಗೊರೆ



ಅಯೋಧ್ಯೆ: ಅಯೋಧ್ಯೆಯ ರಾಮಂದಿರ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಗಣ್ಯರು, ಅತಿಥಿಗಳಿಗೆ ಹಲವು ಉಡುಗೊರೆಗಳನ್ನು ನೀಡಲಾಗಿದೆ. ಈ ಪೈಕಿ ಲೋಹದ ಹಣತೆ, ಅಯೋಧ್ಯೆಯ ಕುರಿತಾದ ಪುಸ್ತಕ, ವಿಶೇಷ ಮಾಲೆ, ಭಗವಾನ್ ರಾಮನ ಹೆಸರು ಇರುವ ಸ್ಕಾರ್ಫ್ ಗಳು ಪ್ರಮುಖವಾದದ್ದಾಗಿದೆ.

### ಮಂದಿರ ನಿರ್ಮಾಣ ಕಾರ್ಮಿಕರನ್ನು ಭೇಟಿಯಾಗಿ ಪುಷ್ಪವೃಷ್ಟಿ ಮಾಡಿದ ಪ್ರಧಾನಿ ಮೋದಿ



ಅಯೋಧ್ಯೆ: ಪ್ರಧಾನಿ ಮೋದಿ ಉಪಸ್ಥಿತಿಯಲ್ಲಿ ಅಯೋಧ್ಯೆಯ ರಾಮ ಮಂದಿರದಲ್ಲಿ ರಾಮಲಲ್ಲಾ ವಿಗ್ರಹದ ಪ್ರಾಣಪ್ರತಿಷ್ಠಾಪನೆ ಸಾಂಗವಾಗಿ ಸಂಪನ್ನಗೊಂಡಿದೆ. ಪ್ರಧಾನಿ ಮೋದಿ ಮಂದಿರ ನಿರ್ಮಾಣ ಕಾರ್ಮಿಕರನ್ನು ಭೇಟಿ ಮಾಡಿದ್ದು ಅವರ ಮೇಲೆ ಪುಷ್ಪವೃಷ್ಟಿಗೈದು ಸಂಭ್ರಮಿಸಿದ್ದಾರೆ. ಇದೇ ವೇಳೆ ದೇವಾಲಯದ ಪ್ರಾಂಗಣದಲ್ಲಿರುವ ಶಿವ ದೇವಾಲಯ ಸೇರಿ ಹಲವು ಮಂದಿರಗಳಿಗೆ ಭೇಟಿ ನೀಡಿದರು. ಇದೇ ವೇಳೆ ಮೋದಿ ಜಟಾಯು ಪುತ್ಥಳಿಯನ್ನೂ ಅನಾವರಣಗೊಳಿಸಿದರು.


### ಪೂಜೆ ಸಲ್ಲಿಸಲು ಪ್ರಧಾನಿ ಮೋದಿಗೆ ದೇವರು ಕೊಟ್ಟ ಅವಕಾಶ: ಎಚ್‌ಡಿ ದೇವೇಗೌಡ



ಅಯೋಧ್ಯೆ: ಅಯೋಧ್ಯೆಯಲ್ಲಿ ನಡೆಯುತ್ತಿರುವ ರಾಮಲಲ್ಲಾ ಅವರ ಪ್ರಾಣ ಪ್ರತಿಷ್ಠಾಪನಾ ಸಮಾರಂಭದಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿ ಪೂಜೆ ನೆರವೇರಿಸುತ್ತಿರುವುದು ದೇವರು ಕೊಟ್ಟ ಅವಕಾಶ ಎಂದು ಜೆಡಿಎಸ್ ವರಿಷ್ಠ ಹೆಚ್.ಡಿ. ದೇವೇಗೌಡ ಹೇಳಿದ್ದಾರೆ.

ರಾಮ ಪ್ರಾಣ ಪ್ರತಿಷ್ಠಾಪನಾ ಕಾರ್ಯಕ್ರಮಕ್ಕೆ ತಮ್ಮನ್ನು ಆಹ್ವಾನಿಸಿದ್ದಕ್ಕಾಗಿ ಉತ್ತರ ಪ್ರದೇಶ ಸಿಎಂ ಯೋಗಿ ಆದಿತ್ಯನಾಥ್ ಅವರಿಗೆ ಧನ್ಯವಾದ ಅರ್ಪಿಸಿದ ಮಾಜಿ ಪ್ರಧಾನಿ, ಇಂದು ಐತಿಹಾಸಿಕ ಕಾರ್ಯಕ್ರಮವಾಗಿದೆ ಎಂದರು.

### ಪ್ರಧಾನಿ ಮೋದಿ, ಸಿಎಂ ಯೋಗಿ ಆದಿತ್ಯನಾಥ್ ರಾಮ, ಲಕ್ಷ್ಮಣ ಇದ್ದಂತೆ: ನಟ ಸುಮನ್



ಅಯೋಧ್ಯೆ: ಪ್ರಧಾನಿ ನರೇಂದ್ರ ಮೋದಿ ಹಾಗೂ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ರಾಮ, ಲಕ್ಷ್ಮಣ ಇದ್ದಂತೆ ಎಂದು ಬಹುಭಾಷಾ ನಟ ಸುಮನ್ ಹೇಳಿದ್ದಾರೆ.

ರಾಮಲಲ್ಲಾ ಪ್ರಾಣ ಪ್ರತಿಷ್ಠಾಪನಾ ಸಮಾರಂಭದಲ್ಲಿ ಅತಿಥಿಯಾಗಿ ಪಾಲ್ಗೊಂಡು, ಸುದ್ದಿಗಾರರೊಂದಿಗೆ ಮಾತನಾಡಿದ 'ಗಬ್ಬರ್ ಈಸ್ ಬ್ಯಾಕ್' ನಟ ಸುಮನ್, ರಾಮ ಮಂದಿರ ಉದ್ಘಾಟನೆ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರನ್ನು ಅಭಿನಂದಿಸಿದ್ದಾರೆ.

### 'ನಮ್ಮೆಲ್ಲರಿಗೂ ಅತ್ಯಂತ ಭಾವನಾತ್ಮಕ ಕ್ಷಣ: ಯೋಗಿ ಆದಿತ್ಯಾನಾಥ್



ಅಯೋಧ್ಯೆ: ರಾಮಮಂದಿರ ಉದ್ಘಾಟನೆ ನಮ್ಮೆಲ್ಲರಿಗೂ ಅತ್ಯಂತ ಭಾವನಾತ್ಮಕ ಕ್ಷಣವಾಗಿದ್ದು, 500 ವರ್ಷಗಳ ಕಾಯುವಿಕೆ ಕೊನೆಗೂ ಅಂತ್ಯವಾಗಿದೆ ಎಂದು ಉತ್ತರ ಪ್ರದೇಶ ಸಿಎಂ ಯೋಗಿ ಆದಿತ್ಯಾನಾಥ್ ಹೇಳಿದ್ದಾರೆ.

## ಬಿಲ್ಲು ಬಾಣ ಹಿಡಿದು ಬಿಜೆಪಿ ಶಾಸಕ ಲಿಂಬಾವಳಿಯತ್ತ ಗುರಿಯಿಟ್ಟ ಸಿಎಂ



ಬೆಂಗಳೂರು: ಅಯೋಧ್ಯೆಯ ಪ್ರಾಣ ಪ್ರತಿಷ್ಠಾಪನೆ ಬೆನ್ನಲ್ಲೇ ಮಹಾದೇವಪುರ ಕ್ಷೇತ್ರದ ಹಿರಂಡಹಳ್ಳಿಯಲ್ಲಿ ಸೀತಾರಾಮ ಲಕ್ಷ್ಮಣ ದೇವಾಲಯ ಲೋಕಾರ್ಪಣೆ ಗೊಂಡಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಉದ್ಘಾಟಿಸಿದ್ದಾರೆ.

ದೇವಾಲಯ ಉದ್ಘಾಟನೆ ಮಾಡಿ ಟ್ವೀಟ್ ಮಾಡಿರುವ ಸಿದ್ದರಾಮಯ್ಯ.. ಬಿದರಹಳ್ಳಿ ಹೋಬಳಿಯ, ಹಿರಂಡಹಳ್ಳಿ ಶ್ರೀರಾಮ ಟೆಂಪಲ್ ಟ್ರಸ್ಟ್ ನಿರ್ಮಿಸಿದ್ದ ಸಕುಟುಂಬ ಸಮೇತನಾಗಿರುವ ಸೀತಾರಾಮ ಲಕ್ಷ್ಮಣ ದೇವಾಲಯ ಹಾಗೂ 33 ಅಡಿ ಎತ್ತರದ ಏಕಶಿಲಾ ಆಂಜನೇಯ ಸ್ವಾಮಿ ವಿಗ್ರಹದ ಶಿಲಾ ಪ್ರತಿಷ್ಠಾಪನಾ ಕಾರ್ಯಕ್ರಮವನ್ನು ಉದ್ಘಾಟಿಸಿ, ಬಳಿಕ ಮಹಾ ಕುಂಭಾಭಿಷೇಕದಲ್ಲಿ ಭಾಗವಹಿಸಿದೆ. ಸಚಿವರಾದ ಬೈರತಿ ಸುರೇಶ್, ಈಶ್ವರ್ ಖಂಡ್ರೆ, ಆಯೋಗದ ಉಪಾಧ್ಯಕ್ಷರಾದ ರಾಜು ಗೌಡ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಕೆ ಗೋವಿಂದ ರಾಜು, ಶಾಸಕರಾದ ಅರವಿಂದ್ ಲಿಂಬಾವಳಿ, ಮಾಜಿ ಸಚಿವರಾದ ಹೆಚ್‌ಎಂ ರೇವಣ್ಣ ಉಪಸ್ಥಿತರಿದ್ದರು ಎಂದರು.

ಲಿಂಬಾವಳಿಯತ್ತ ಗುರಿಯಿಟ್ಟ ಸಿದ್ದರಾಮಯ್ಯ: ದೇವಾಲಯ ಉದ್ಘಾಟನೆ ಬಳಿಕ ಸಭಾ ಕಾರ್ಯಕ್ರಮ ನಡೆಯಿತು. ಈ ವೇಳೆ ಸಿದ್ದರಾಮಯ್ಯಗೆ ವೇದಿಕೆ ಮೇಲೆ ಬಿಲ್ಲು ಬಾಣಗಳನ್ನು ನೀಡಲಾಯಿತು. ಬಿಲ್ಲು, ಬಾಣ ಎತ್ತಿದ್ದ ಸಿದ್ದರಾಮಯ್ಯ, ಬಿಜೆಪಿ ಶಾಸಕ ಅರವಿಂದ್ ಲಿಂಬಾವಳಿಯತ್ತ ಗುರಿಯಿಟ್ಟರು. ಅದನ್ನು ನೋಡಿದ ಗಣ್ಯರು ನಗೆಗಡಲಲ್ಲಿ ತೇಲಿದರು.

## ದೇವಾಲಯ ಪ್ರವೇಶಿಸದಂತೆ ತಡೆ; ಯಾರು, ಯಾವಾಗ ಭೇಟಿ ನೀಡಬೇಕೆಂದು ಪ್ರಧಾನಿ ನಿರ್ಧರಿಸುತ್ತಾರೆಯೇ: ರಾಹುಲ್ ಗಾಂಧಿ



ನಾಗಾಂವ್: ಅಸ್ಸಾಂನ ಹೈಬೋರಗಾಂವ್‌ನಲ್ಲಿ ಸೋಮವಾರ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರಿಗೆ ಶಂಕರ ದೇವ ಸತ್ರ ದೇವಸ್ಥಾನಕ್ಕೆ ಭೇಟಿ ನೀಡಲು ಅಧಿಕಾರಿಗಳು ಅನುಮತಿ ನೀಡದ ನಂತರ ಹೈ ಡ್ರಾಮಾ ನಡೆಯಿತು. ಗಾಂಧಿ ಮತ್ತಿತರರನ್ನು ಮುಂದಿನ ಯಾವುದೇ ಪ್ರಕ್ರಿಯೆ ನಡೆಯದಂತೆ ಅಲ್ಲಿಯೇ ತಡೆಯಲಾಯಿತು.

ಭಾರತ್ ಜೋಡೋ ನ್ಯಾಯ ಯಾತ್ರೆ ಪ್ರಾರಂಭಿಸುವ ಮುನ್ನಾ ಸ್ಥಳೀಯ ದೇವರಿಗೆ ಪೂಜೆ ಸಲ್ಲಿಸಲು ನಿರ್ಧರಿಸಲಾಗಿತ್ತು. ನಂತರ ದೇವಸ್ಥಾನಕ್ಕೆ ಭೇಟಿ ನೀಡಲು ಗಾಂಧಿಗೆ ಅನುಮತಿ ನಿರಾಕರಿಸಿದ್ದನ್ನು ವಿರೋಧಿಸಿ ಮಹಿಳಾ ಕಾಂಗ್ರೆಸ್ ಮುಖಂಡರು ಧರಣಿ ಕುಳಿತರು. ರಾಹುಲ್ ಕೂಡಾ ಇದರಲ್ಲಿ ಪಾಲ್ಗೊಂಡರು.

ಈ ಮಧ್ಯೆ ಮಧ್ಯಾಹ್ನ 3 ಗಂಟೆಗೆ ಮಾತ್ರ ದೇವಾಲಯಕ್ಕೆ ಭೇಟಿ ನೀಡಲು ಅನುಮತಿ ನೀಡಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ದೇಗುಲಕ್ಕೆ ಭೇಟಿ ನೀಡದಂತೆ ತಮ್ಮನ್ನು ಏಕೆ ತಡೆದಿದ್ದಾರೆ ಎಂದು ಗಾಂಧಿ ಪೊಲೀಸರನ್ನು ಪ್ರಶ್ನಿಸಿದ್ದಾರೆ. ದೇವಸ್ಥಾನಕ್ಕೆ ಯಾವಾಗ, ಯಾರು ಭೇಟಿ ನೀಡಬೇಕು ಎಂದು ಪ್ರಧಾನಿ ನಿರ್ಧರಿಸುತ್ತಾರೆಯೇ ಎಂದು ರಾಹುಲ್ ಕಿಡಿಕಾರಿದ್ದಾರೆ. ನಾವು ಯಾವುದೇ ಸಮಸ್ಯೆಗಳನ್ನು ಸೃಷ್ಟಿಸಲು ಬಯಸುವುದಿಲ್ಲ, ಕೇವಲ ದೇವಸ್ಥಾನದಲ್ಲಿ ಪ್ರಾರ್ಥನೆ ಮಾಡುತ್ತೇವೆ ಎಂದು ಗಾಂಧಿ ಪೊಲೀಸ್ ಅಧಿಕಾರಿಗಳಿಗೆ ಹೇಳಿದ್ದಾರೆ.

## ಪಿಎಸ್‌ಐ ನೇಮಕಾತಿ ಅಕ್ರಮದ ವರದಿ ಸಿಎಂ ಸಿದ್ದರಾಮಯ್ಯಗೆ ನೀಡಿದ ಆಯೋಗ



ಬೆಂಗಳೂರು: ಪಿ.ಎಸ್ ಐ. ನೇಮಕಾತಿ ಅಕ್ರಮ ಆರೋಪಕ್ಕೆ ಸಂಬಂಧಿಸಿದಂತೆ ನ್ಯಾಯಮೂರ್ತಿ ಬಿ. ವೀರಪ್ಪ ಅವರು ತಮ್ಮ ಅಧ್ಯಕ್ಷತೆಯ ಏಕ ಸದಸ್ಯ ಆಯೋಗದ ವರದಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಲ್ಲಿಸಿದರು. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ. ಅತೀಕ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು ಮತ್ತು ನಸೀರ್ ಅಹಮದ್ ಅವರುಗಳು ಉಪಸ್ಥಿತರಿದ್ದರು.

ಪಿಎಸ್‌ಐ ಪರೀಕ್ಷಾ ನೇಮಕಾತಿಯಲ್ಲಿ ನಡೆದಿರುವ ಅಕ್ರಮಗಳ ಕುರಿತಂತೆ ಕೂಲಂಕಶವಾಗಿ ತನಿಖೆ ನಡೆಸಿ ವರದಿ ನೀಡುವಂತೆ ರಾಜ್ಯ ಸರ್ಕಾರವು ನಿವೃತ್ತ ನ್ಯಾಯಮೂರ್ತಿ ಬಿ. ವೀರಪ್ಪ ನೇತೃತ್ವದ ಏಕಸದಸ್ಯ ಆಯೋಗ ರಚಿಸಿತ್ತು.

ಕಳೆದ ವರ್ಷದ ಜುಲೈ 21 ರಂದು ಅಕ್ರಮ ನಡೆದಿರುವ ಬಗ್ಗೆ ಸಮಗ್ರ ತನಿಖೆ ನಡೆಸುವಂತೆ ನ್ಯಾಯಾಂಗ ತನಿಖೆಗೆ ಆದೇಶ ನೀಡಿತ್ತು.

ಕಳೆದ ಬಿಜೆಪಿ ಸರ್ಕಾರದಲ್ಲಿ ಪಿಎಸ್‌ಐ ನೇಮಕಾತಿ ಪರೀಕ್ಷೆಯಲ್ಲಿನ ಅಕ್ರಮ ಭಾರಿ ಸದ್ದು ಮಾಡಿತ್ತು. ಕಾಂಗ್ರೆಸ್ ಇದೇ ವಿಚಾರವಾಗಿ ಬಿಜೆಪಿ ಸರ್ಕಾರ ಹಾಗೂ ಅಂದಿನ ಗೃಹ ಸಚಿವ ಆರಗ ಜ್ಞಾನೇಂದ್ರ ವಿರುದ್ಧ ಹೋರಾಟವನ್ನೇ ನಡೆಸಿತ್ತು.

ಈ ಅಕ್ರಮವನ್ನು ತನಿಖೆ ನಡೆಸುವುದಾಗಿ ಕಾಂಗ್ರೆಸ್ ಹೇಳಿತ್ತು. ಇದೀಗ ಅಧಿಕಾರಕ್ಕೆ ಬಂದ ತಕ್ಷಣ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಕ್ರಮವನ್ನು ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ನೇತೃತ್ವದಲ್ಲಿ ನ್ಯಾಯಾಂಗ ತನಿಖೆಗೆ ಒಪ್ಪಿಸಿತ್ತು.

## ಸಿಎಂ ಸಿದ್ದರಾಮಯ್ಯ ಯಾವತ್ತಿಗೂ ನನ್ನ ನಾಯಕರು: ಶಾಸಕ ರಮೇಶ ಜಾರಕಿಹೊಳಿ



ಬೆಳಗಾವಿ: ಸಿಎಂ ಸಿದ್ದರಾಮಯ್ಯ ಯಾವತ್ತಿಗೂ ನನ್ನ ನಾಯಕರು ಎಂದು ಬಿಜೆಪಿ ಶಾಸಕ ರಮೇಶ ಜಾರಕಿಹೋಳಿ ಹೊಸ ರಾಜಕೀಯ ಚರ್ಚೆಗೆ ಎಡೆಮಾಡಿಕೊಟ್ಟರು.

ಕಾಗವಾಡದಲ್ಲಿ ಮಾಜಿ ಸಚಿವ ಶ್ರೀಮಂತ ಪಾಟೀಲ್ ನೇತೃತ್ವದಲ್ಲಿ ಕಾಂಗ್ರೆಸ್ ವಿರುದ್ಧ ನಡೆದ ಪ್ರತಿಭಟನಾ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಯಾವಾಗಲೂ ನನ್ನ ನಾಯಕರು. ಅವರು ಒಳ್ಳೆಯ ಸಿಎಂ, ಆದರೆ ಡಿಸಿಎಂ ಡಿ ಕೆ ಶಿವಕುಮಾರ ಅವರಿಂದ ಆಡಳಿತ ವ್ಯವಸ್ಥೆ ಬದಲಾವಣೆ ಆಗಿದೆ. ನಮ್ಮ ಸುದೈವ ಸಿದ್ದರಾಮಯ್ಯ ಸಿಎಂ ಆಗಿದ್ದಾರೆ. ಒಂದು ವೇಳೆ ಕೊತ್ವಾಲನ ಶಿಷ್ಯ ಡಿ.ಕೆ. ಶಿವಕುಮಾರ್ ಸಿಎಂ ಆಗಿದ್ದರೆ ವಿಷಕನ್ಯೆ ಮತ್ತು ಡಿಕೆಶಿ ಕೂಡಿ ಬೆಳಗಾವಿ ಜಿಲ್ಲೆ ಮಾರಾಟ ಮಾಡುತ್ತಿದ್ದರು. ನಮ್ಮ ಉತಾರಗಳು ಸಹಿತ ಡಿಕೆಶಿ ಹೆಸರಿಗೆ ಇರುತ್ತಿದ್ದವು " ಎಂದು ನೇರ ವಾಗ್ದಾಳಿ ನಡೆಸಿದರು.

ಶಾಸಕ ರಾಜು ಕಾಗೆ ನೇರ ನುಡಿ ಹೊಂದಿದ್ದಾರೆ. ಆದರೆ, ಈಗ ಅವರಿಗೆ ಅಥಣಿ ಗಾಳಿ ಬೀಸಿದ್ದರಿಂದ ಅವರಲ್ಲಿ ಬದಲಾವಣೆ ಆಗಿದೆ. ಮತಕ್ಷೇತ್ರದಲ್ಲಿ ಜನರ ಮೇಲೆ ದಬ್ಬಾಳಿಕೆ ಆರಂಭವಾಗಿದೆ. ಈ ರೀತಿ ಅನ್ಯಾಯ ಮಾಡುವುದು ಅಷ್ಟು ಸರಿಯಲ್ಲ. ಅಧಿಕಾರಿಗಳು ಎಚ್ಚರಿಕೆಯಲ್ಲಿ ಇರಬೇಕು ಎಂದು ಕಿಡಿ ಕಾರಿದರು.

## ತಡ ರಾತ್ರಿ ಪಾರ್ಟಿ: ಆಸ್ಟ್ರೇಲಿಯಾ ಆಲ್ ರೌಂಡರ್ ಗ್ಲೆನ್ ಮ್ಯಾಕ್ಸ್ ವೆಲ್ ಆಸ್ಪತ್ರೆಗೆ ದಾಖಲು, ಬಿಡುಗಡೆ



ಕ್ಯಾನ್ಬೆರಾ: ಆಸ್ಟ್ರೇಲಿಯಾದ ಆಲ್ ರೌಂಡರ್ ಗ್ಲೆನ್ ಮ್ಯಾಕ್ಸ್ ವೆಲ್ ಆಸ್ಪತ್ರೆಗೆ ದಾಖಲಾಗಿದ್ದಾರೆ. ತಡ ರಾತ್ರಿ ಪಾರ್ಟಿ ಮಾಡಿದ ಬಳಿಕ ಆರೋಗ್ಯದಲ್ಲಿ ಏರುಪೇರಾದ ಹಿನ್ನೆಲೆಯಲ್ಲಿ ಮ್ಯಾಕ್ಸ್ ವೆಲ್ ಆಸ್ಪತ್ರೆ ಸೇರಿದ್ದರು.

ವಿಶ್ವಕಪ್ ಸ್ಟಾರ್ ಎಂದೇ ಖ್ಯಾತಿ ಪಡೆದಿರುವ ಗ್ಲೆನ್ ಮ್ಯಾಕ್ಸ್ ವೆಲ್, ಇತ್ತೀಚಿನ ವರದಿಯ ಪ್ರಕಾರ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದು, ವೆಸ್ಟ್ ಇಂಡೀಸ್ ವಿರುದ್ಧದ ಟಿ20 ಸರಣಿಗೆ ತಯಾರಿ ನಡೆಸುತ್ತಿದ್ದಾರೆ. ಸರಣಿ ಫೆ.09 ರಿಂದ ಆರಂಭವಾಗಲಿದೆ.

ಗ್ಲೆನ್ ಮ್ಯಾಕ್ಸ್‌ವೆಲ್, ದಿ ಡೈಲಿ ಟೆಲಿಗ್ರಾಫ್ ಪ್ರಕಾರ, ಅಡಿಲೇಡ್‌ನಲ್ಲಿನ ಸಂಗೀತ ಕಚೇರಿಯಲ್ಲಿ ಮದ್ಯಪಾನ ಮಾಡುತ್ತಿದ್ದಾಗ ಅನಾರೋಗ್ಯಕ್ಕೀಡಾಗಿದ್ದು, ಆಂಬ್ಯುಲೆನ್ಸ್‌ನಲ್ಲಿ ಆಸ್ಪತ್ರೆಗೆ ಕರೆದೊಯ್ಯಲಾಯಿತು, ಚಿಕಿತ್ಸೆ ಪಡೆದ ಬಳಿಕ ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ.

ಅನಾರೋಗ್ಯಕ್ಕೆ ನಿಖರವಾದ ಕಾರಣವನ್ನು ಇನ್ನೂ ಗುರುತಿಸಲಾಗಿಲ್ಲ. ಕಳೆದ ವಾರ ಅಡಿಲೇಡ್ ಓವಲ್‌ನಲ್ಲಿ ನಡೆದ ಟೆಸ್ಟ್ ಪಂದ್ಯವೊಂದರಲ್ಲಿ ಭಾಗವಹಿಸಿದ್ದ ಆಸ್ಟ್ರೇಲಿಯಾ ಮತ್ತು ವೆಸ್ಟ್ ಇಂಡೀಸ್ ಆಟಗಾರರು ಕೂಡ ಸಂಗೀತ ಕಚೇರಿಯಲ್ಲಿ ಭಾಗವಹಿಸಿದ್ದರು ಆದರೆ ಮ್ಯಾಕ್ಸ್‌ವೆಲ್ ಅವರೊಂದಿಗೆ ಬರಲಿಲ್ಲ ಎಂದು ವರದಿ ತಿಳಿಸಿದೆ. ವೆಸ್ಟ್ ಇಂಡೀಸ್ ಸರಣಿಯಲ್ಲಿ ಗ್ಲೆನ್ ಮ್ಯಾಕ್ಸ್ ವೆಲ್ ಆಡಲಿದ್ದಾರೆ ಎಂದು ತಿಳಿದುಬಂದಿದೆ.

## ಬಿಲ್ಕಿಸ್ ಬಾನೋ ಪ್ರಕರಣ: ಎಲ್ಲಾ 11 ಅಪರಾಧಿಗಳು ಗೋಧ್ರಾ ಉಪ ಜೈಲಿನಲ್ಲಿ ಶರಣಾಗತಿ



ಗೋಧ್ರಾ: ಸುಪ್ರೀಂ ಕೋರ್ಟ್ ವಿಧಿಸಿರುವ ಗಡುವಿಗೆ ಅನುಗುಣವಾಗಿ ಬಿಲ್ಕಿಸ್ ಬಾನೋ ಪ್ರಕರಣದ ಎಲ್ಲ 11 ಅಪರಾಧಿಗಳು ಗುಜರಾತ್‌ನ ಪಂಚಮಹಲ್ ಜಿಲ್ಲೆಯ ಗೋಧ್ರಾ ಉಪ ಜೈಲಿನಲ್ಲಿ ಶರಣಾಗಿದ್ದಾರೆ.


"ಎಲ್ಲಾ 11 ಅಪರಾಧಿಗಳು ಭಾನುವಾರ ತಡರಾತ್ರಿ ಜೈಲು ಅಧಿಕಾರಿಗಳ ಮುಂದೆ ಶರಣಾಗಿದ್ದಾರೆ. ಶರಣಾಗತಿಗೆ ಸುಪ್ರೀಂ ಕೋರ್ಟ್ ನೀಡಿದ್ದ ಜನವರಿ 21 ರ ಮಧ್ಯರಾತ್ರಿ ಗಡುವು ಮೀರುವ ಮುನ್ನ ಎಲ್ಲಾ ಅಪರಾಧಿಗಳು ಜೈಲು ತಲುಪಿದ್ದಾರೆ" ಎಂದು ಸ್ಥಳೀಯ ಅಪರಾಧ ವಿಭಾಗದ ಇನ್ಸ್‌ಪೆಕ್ಟರ್ ಎನ್‌ಎಲ್ ದೇಸಾಯಿ ಅವರು ತಿಳಿಸಿದ್ದಾರೆ.

2002ರ ಗುಜರಾತ್‌ನ ಗೋದ್ರಾ ಗಲಭೆ ಸಂದರ್ಭದಲ್ಲಿ, ಗರ್ಭಿಣಿಯಾಗಿದ್ದ ಬಿಲ್ಕಿಸ್ ಬಾನು ಮೇಲೆ ಈ ಕ್ರೂರಿಗಳು ಸಾಮೂಹಿಕ ಅತ್ಯಾಚಾರ ಎಸಗಿದ್ದರು. ಆಕೆಯ ಮೂರು ವರ್ಷದ ಮಗಳು ಸೇರಿದಂತೆ ಕುಟುಂಬದ ಏಳು ಮಂದಿಯನ್ನು ಹತ್ಯೆ ಮಾಡಲಾಗಿತ್ತು.

ಈ ಪ್ರಕರಣದಲ್ಲಿ ಮರಣದಂಡನೆಗೆ ಒಳಗಾಗಿದ್ದ 11 ಮಂದಿಯ ಶಿಕ್ಷೆಯನ್ನು ಜೀವಾವಧಿಗೆ ಇಳಿಕೆ ಮಾಡಲಾಗಿತ್ತು. ಆದರೆ ಶಿಕ್ಷೆ ಅವಧಿ ಮುಗಿಯುವುದಕ್ಕೂ ಮುನ್ನವೇ ಗುಜರಾತ್ ಸರ್ಕಾರ, ಕಳೆದ ವರ್ಷದ ಸ್ವಾತಂತ್ರ್ಯ ದಿನಾಚರಣೆ ಸಂದರ್ಭದಲ್ಲಿ ಅವರನ್ನು 'ಸನ್ನಡತೆ' ಆಧಾರದಲ್ಲಿ ಬಿಡುಗಡೆ ಮಾಡಿತ್ತು. ಈ ನಿರ್ಧಾರ ವ್ಯಾಪಕ ಆಕ್ರೋಶಕ್ಕೆ ಒಳಗಾಗಿತ್ತು. ಇದರ ವಿರುದ್ಧ ಬಿಲ್ಕಿಸ್ ಬಾನು ಮತ್ತೊಂದು ಸುತ್ತಿನ ಕಾನೂನು ಹೋರಾಟ ನಡೆಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್, ಗುಜರಾತ್ ಸರ್ಕಾರ, 11 ಅಪರಾಧಿಗಳಿಗೆ ನೀಡಿದ್ದ ವಿನಾಯತಿಯನ್ನು ರದ್ದುಗೊಳಿಸಿತ್ತು ಮತ್ತು ಜನವರಿ 21 ರೊಳಗೆ ಶರಣಾಗುವಂತೆ ಅಪರಾಧಿಗಳಿಗೆ ಆದೇಶಿಸಿತ್ತು.

## ಗಾಜಾದಲ್ಲಿ ಸಾವಿನ ಸಂಖ್ಯೆ 25,105 ಕ್ಕೆ ಏರಿಕೆ: ಹಮಾಸ್ ನೇತೃತ್ವದ ಗಾಜಾ ಆರೋಗ್ಯ ಸಚಿವಾಲಯ



ಗಾಜಾ: ಇಸ್ರೇಲ್– ಹಮಾಸ್ ನಡುವಿನ ಯುದ್ಧದಲ್ಲಿ ಈ ವರೆಗೂ 25,105 ಮಂದಿ ಸಾವನ್ನಪ್ಪಿದ್ದಾರೆ.

ಹಮಾಸ್ ನೇತೃತ್ವದ ಗಾಜಾ ಆರೋಗ್ಯ ಸಚಿವಾಲಯ ಈ ಬಗ್ಗೆ ಮಾಹಿತಿ ನೀಡಿದ್ದು, ಅ.07 ರಿಂದ ಇಸ್ರೇಲ್ ಯುದ್ಧ ಘೋಷಿಸಿದಾಗಿನಿಂದ ಈ ವರೆಗೂ 25,105 ಮಂದಿ ಸಾವನ್ನಪ್ಪಿದ್ದಾರೆ ಎಂದು ಹೇಳಿದೆ.

ಯುದ್ಧದ ಪರಿಣಾಮ ಇಸ್ರೇಲಿ ಪಡೆ ಹಾಗೂ ಪ್ಯಾಲೆಸ್ತೇನ್ ಸೇನೆಯ ನಡುವೆ ಉಂಟಾದ ಸಂಘರ್ಷದಲ್ಲಿ 62,681 ಮಂದಿ ತೀವ್ರವಾಗಿ ಗಾಯಗೊಂಡಿದ್ದಾರೆ. ಸಚಿವಾಲಯ ನೀಡಿರುವ ಮಾಹಿತಿಯ ಪ್ರಕಾರ ಕಳೆದ 24 ಗಂಟೆಗಳಲ್ಲಿ 178 ಮಂದಿ ಗಾಜಾದಾದ್ಯಂತ ಸಾವನ್ನಪ್ಪಿದ್ದಾರೆ.

"ಹತ್ತಾರು ಜನರು ಇನ್ನೂ ಅವಶೇಷಗಳಡಿಯಲ್ಲಿದ್ದಾರೆ" ಎಂದು ಹಮಾಸ್ ಸರ್ಕಾರದ ಮಾಧ್ಯಮ ಕಚೇರಿ ಪ್ರತ್ಯೇಕ ಹೇಳಿಕೆಯಲ್ಲಿ ತಿಳಿಸಿದೆ.

# ರಾಮ ಜನ್ಮಭೂಮಿ ಮರಳಿ ಪಡೆಯಲು 'ಸಾಧನೆ' ಬಿಟ್ಟು, ಐಚಿತಿ ಓದಿ ಕಾನೂನು ಹೋರಾಟ ಮಾಡಿದ 'ನಾಗಾ ಸಾಧು'

ಅಯೋಧ್ಯೆ: 500 ವರ್ಷಗಳಿಗೂ ಅಧಿಕ ಹೋರಾಟದ ಫಲವಾಗಿ ಇಂದು ರಾಮ ಜನ್ಮಭೂಮಿಯಲ್ಲಿ ರಾಮಮಂದಿರ ತಲೆ ಎತ್ತಿದ್ದು, ಈ ಹೋರಾಟದಲ್ಲಿ ಸಾಥ್ ನೀಡಿದ್ದ ನಾಗಾ ಸಾಧುವೊಬ್ಬರು ದೇಗುಲ ನಿರ್ಮಾಣಕ್ಕಾಗಿ ತಮ್ಮ ಸಾಧನೆ ಬದಿಗೊತ್ತಿ ಐಚಿತಿ ಓದಿ ರಾಮಮಂದಿರ ಪರ ಕಾನೂನು ಹೋರಾಟ ನಡೆಸಿದ್ದರು.

ಇವರ ಹೆಸರು ಬೈರಾಗಿ ನಾಗ ಸಾಧು ಕರುಣೇಶ್ ಶುಕ್ಲಾ.. ಇವರು 2019 ರ ರಾಮ ಜನ್ಮಭೂಮಿಯ ಮೂಲ ಅರ್ಜಿದಾರರಲ್ಲಿ ಒಬ್ಬರಾದ ತಮ್ಮ ಗುರು ಮಹಂತ್ ಧರಂ ದಾಸ್ ಪರ ಕಾನೂನು ಹೋರಾಟ ನಡೆಸಿದ್ದರು. ಇದಕ್ಕಾಗಿ ಅವರು ನಾಗಾ ಸಾಧು ಸಾಧನೆಯನ್ನು ಬದಿಗೊತ್ತಿ ಕಾನೂನು ಓದಿ ಸುಪ್ರೀಂ ಕೋರ್ಟ್ ನಲ್ಲಿ ಕಾನೂನು ಹೋರಾಟ ನಡೆಸಿದ್ದರು.

ರಾಮ್ ಲಲ್ಲಾ ಅವರ ಜನ್ಮಸ್ಥಳವನ್ನು ಪೂಜಿಸುವ ಮತ್ತು ನಿರ್ವಹಿಸುವ ಹಕ್ಕನ್ನು ಒತ್ತಾಯಿಸಿ ನಿರ್ವಾಣಿ ಅನಿ ಅಖಾರದ ಪ್ರಾಥಮಿಕ ದಾವೆದಾರರಾದ ಮಹಂತ್ ದಾಸ್ ಅವರನ್ನು ಶುಕ್ಲಾ ಪ್ರತಿನಿಧಿಸಿದ್ದರು. ಈ ಕುರಿತು ಮಾತನಾಡಿದ ಅವರು, 'ತಮ್ಮ ಗುರು ಮಹಂತ್ ಧರಮ್ ದಾಸ್ ಅವರನ್ನು ದಯಾನಂದ ಕಾಲೇಜ್ ಆಫ್ ಲಾಗೆ ಪ್ರವೇಶಕ್ಕಾಗಿ ಕಾನ್ಪುರಕ್ಕೆ ಕಳುಹಿಸಿದ್ದಾರೆ ಎಂದು ಹೇಳಿದರು. ಕಠಿಣ ಪರಿಶ್ರಮದಿಂದ ವಕೀಲನಾಗಿ ತೇರ್ಗಡೆಯಾದೆ. ಮತ್ತು ದಾಸ್ ಅವರ ಪರವಾಗಿ ಉನ್ನತ ನ್ಯಾಯಾಲಯದಲ್ಲಿ ಹೋರಾಡುವ ಕನಸನ್ನು ನನಸಾಗಿಸಿಕೊಂಡೆ ಎಂದು ಹೇಳಿದರು.



1991 ರಲ್ಲಿ ಉತ್ತರ ಪ್ರದೇಶದ ಬಸ್ತಿ ಜಿಲ್ಲೆಯ ಧಾರ್ಮಿಕ ಕುಟುಂಬದಲ್ಲಿ ಜನಿಸಿದ ಧರಂ ದಾಸ್ ಅವರನ್ನು ಅಯೋಧ್ಯೆಯ ಆಶ್ರಮಕ್ಕೆ ಕಳುಹಿಸಲಾಯಿತು, ಅಲ್ಲಿ ಅವರು ಮಹಾಂತ್ ಧರಮ್ ದಾಸ್ ಅವರಿಂದ 'ಬೈರಾಗಿ ನಾಗ ಸಾಧು' ಎಂದು ದೀಕ್ಷೆ ಪಡೆದರು. ಸುಪ್ರೀಂ ಕೋರ್ಟ್ ನಲ್ಲಿ ಪ್ರಕರಣದ ತೀಪು ಪ್ರಕಟವಾದ ನಂತರ, ದಾಸ್ ತೀರ್ಪಿನಿಂದ ಸಾಕಷ್ಟು ತೃಪ್ತರಾಗಿದ್ದಾರೆ, ಇದು ರಾಮ ಮಂದಿರವನ್ನು ನೋಡಿಕೊಳ್ಳಲು ಟ್ರಸ್ಟ್ ರಚನೆಗೆ ಆದೇಶಿಸಿದೆ. ಮಾತ್ರವಲ್ಲದೇ ಶುಕ್ಲಾ ಅವರು ಅಕ್ರಮ ಮತಾಂತರ ವಿರುದ್ಧವೂ ಹೋರಾಟ ನಡೆಸಿ 50-60 ಹಿಂದೂ ಮಹಿಳೆಯರನ್ನು ಲವ್ ಜಿಹಾದ್‌ನ ಹಿಡಿತದಿಂದ ರಕ್ಷಿಸಿದ್ದಾರೆ.

"ನಾಗ ಸಾಧುವಾಗಿ, ನಾನು ಪ್ರಪಂಚವನ್ನು ತ್ಯಜಿಸಿದೆ. ಆದರೆ ಸಮಾಜದ ಕಡೆಗೆ ನನ್ನ ಕರ್ತವ್ಯಗಳನ್ನು ತ್ಯಜಿಸಲಿಲ್ಲ. ಇದು ವೈಯಕ್ತಿಕ ಮತ್ತು ಆಧ್ಯಾತ್ಮಿಕ ಬೆಳವಣಿಗೆಯನ್ನು ಸಮತೋಲನಗೊಳಿಸುವ ಮತ್ತು ಜಗತ್ತಿಗೆ ಧನಾತ್ಮಕವಾಗಿ ಕೊಡುಗೆ ನೀಡುವ ಮಹತ್ವವನ್ನು ನನಗೆ ಕಲಿಸುತ್ತದೆ. ನಾನು ಸಮಾಜದ ನಿಸ್ವಾರ್ಥ ಯೋಧ" ಎಂದು ಹೇಳಿದ ಶುಕ್ಲಾ, ಇಂತಹ ಇನ್ನಷ್ಟು ಕದನಗಳಿಗೆ ತಾನು ಸಿದ್ಧ ಎಂದು ಹೇಳಿದ್ದಾರೆ.

ಸುಪ್ರೀಂ ಕೋರ್ಟ್‌ನ ಮಹತ್ವದ ತೀರ್ಪನ್ನು ಮಾಜಿ ಸಿಜೆಐಗಳಾದ ನ್ಯಾಯಮೂರ್ತಿ ರಂಜನ್ ಗೊಗೊಯ್, ಶರದ್ ಅರವಿಂದ್ ಬೋಬ್ಡೆ – ನ್ಯಾಯಮೂರ್ತಿಗಳಾದ ಡಾ ಚಂದ್ರಚೂಡ್ (ಈಗಿನ ಸಿಜೆಐ), ಅಶೋಕ್ ಭೂಷಣ್ ಮತ್ತು ಎಸ್ ಅಬ್ದುಲ್ ನಜೀರ್ ಅವರು 2019 ರಲ್ಲಿ ಹಿಂದೂ ಪಕ್ಷಗಳ ಪರವಾಗಿ ತೀಪು ನೀಡಿದ್ದರು ಮತ್ತು ಮಾಜಿ ಸಿಜೆಐ ನ್ಯಾಯಮೂರ್ತಿ ಗೊಗೊಯ್ ಅವರ ನೇತೃತ್ವದ ಪೀಠವು ಉತ್ತರ ಪ್ರದೇಶದ ಅಯೋಧ್ಯೆಯ ವಿವಾದಿತ ಸ್ಥಳದಲ್ಲಿ ಟ್ರಸ್ಟ್‌ನಿಂದ ರಾಮ ಮಂದಿರ ನಿರ್ಮಾಣಕ್ಕೆ ನಿರ್ದೇಶನ ನೀಡಿದ್ದರು.

ಜನವರಿ 22 ರಂದು ಅಯೋಧ್ಯೆಯಲ್ಲಿ ರಾಮಮಂದಿರ ಪ್ರತಿಷ್ಠಾಪನೆ ಸಮಾರಂಭದ ಆಹ್ವಾನಿತರ ಪಟ್ಟಿಯಲ್ಲಿ ಈ ಐವರೂ ನ್ಯಾಯಾಧೀಶರು ಇದ್ದಾರೆ. ನ್ಯಾಯಾಧೀಶರಲ್ಲದೇ ವಿವಿಧ ರಂಗದ 7,000 ಕ್ಕೂ ಹೆಚ್ಚು ಗಣ್ಯರು ಕೂಡ ಕಾರ್ಯಕ್ರಮಕ್ಕೆ ಸಾಕ್ಷಿಯಾಗಲಿದ್ದಾರೆ.

# ಸಕಾಲದಲ್ಲಿ ಅನುದಾನವನ್ನು ಬಳಿಸಿಕೊಳ್ಳುವಂತೆ ಅಧಿಕಾರಿಗಳಿಗೆ ಜಿಪಂ ಸಿಇಓ ರಾಹುಲ್ ಶಿಂಧೆ ಸೂಚನೆ

ಬೆಳಗಾವಿ: 2023-24ನೇ ಸಾಲಿನ ಆರ್ಥಿಕ ವರ್ಷ ಮುಕ್ತಾಯ ಹಂತದಲ್ಲಿದ್ದು, ಈಗಾಗಲೇ ಬಿಡುಗಡೆಯಾದ ಅನುದಾನವನ್ನು ಲ್ಯಾಪ್ಸ ಆಗದಂತೆ ಬಳಕೆ ಮಾಡಲು ಅಧಿಕಾರಿಗಳಿಗೆ ಜಿಪಂ ಸಿಇಓ ರಾಹುಲ್ ಶಿಂಧೆ ಅವರು ತಿಳಿಸಿದರು.



ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ (ಜ.22) ಪಂಚಾಯತ ರಾಜ್ ಇಂಜನೀಯರಿಂಗ್ ವಿಭಾಗ ಬೆಳಗಾವಿ, ಚಿಕ್ಕೋಡಿ, ಪ್ರಧಾನ ಮಂತ್ರಿ ಗ್ರಾಮೀಣ ಸಡಕ್ ಯೋಜನೆ, ಹಾಗೂ ಕೆ.ಆರ್.ಐ.ಡಿಎಲ್ ಇಲಾಖೆಗಳ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

2023-24ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನವನ್ನು ಸಕಾಲದಲ್ಲಿ ಬಳಿಸಿಕೊಂಡು ಲ್ಯಾಪ್ಸ ಆಗದಂತೆ ನೋಡಿಕೊಳ್ಳುವುದು, ಒಂದು ವೇಳೆ ಲ್ಯಾಪ್ಸ ಆದಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನು ಹೊಣೆ ಗಾರರನ್ನಾಗಿ ಮಾಡಲಾಗುವುದು.

ಯಾವುದೇ ಕಾರಣಕ್ಕೂ ಟೆಂಡರ್ ಕರೆಯುವಲ್ಲಿ ವಿಳಂಬಕ್ಕೆ ಆಸ್ಪದ ನೀಡುವಂತಿಲ್ಲ. ಸೈಟ್ ತೊಂದರೆಗಳನ್ನು ಆದಷ್ಟು ಬೇಗ ಪರಿಹರಿಸಿ ಉತ್ತಮ ಗುಣಮಟ್ಟದ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿ ಪೂರ್ಣಗೊಳಿಸುವಂತೆ ಎಂದು ಸಭೆಗೆ ತಿಳಿಸಿದರು.

ಕಾರ್ಯಕಾರಿ ಅಭಿಯಂತರರು ಪಂಚಾಯತ್ ರಾಜ್ ಇಂಜನೀಯರಿಂಗ ವಿಭಾಗ ಚಿಕ್ಕೋಡಿ/ಬೆಳಗಾವಿ, ಕಾರ್ಯಕಾರಿ ಅಭಿಯಂತರರು ಪಿ.ಎಮ್.ಜಿ.ಎಸ್. ವಾಯ್. ಕಾರ್ಯಕಾರಿ ಅಭಿಯಂತರರು ಕೆ.ಆರ್.ಐ.ಡಿ.ಎಲ್, ಜಿಲ್ಲೆಯ ಎಲ್ಲ ತಾಲ್ಲೂಕಿನ ಸಹಾಯಕ ಕಾರ್ಯಕಾರಿ ಅಭಿಯಂತರರು ಪಂ.ರಾ.ಇಂ. ವಿಭಾಗ ಬೆಳಗಾವಿ/ಚಿಕ್ಕೋಡಿ ಮತ್ತಿತರರು ಉಪಸ್ಥಿತರಿದ್ದರು.

# ರಾಮಮಂದಿರ ನಿರ್ಮಾಣಕ್ಕೆ ಭೂಮಿ ಪೂಜೆಗೆ ತೆರಳಿದ್ದ ಪ್ರತಾಪ್ ಸಿಂಹಗೆ ಘೇರಾವ್



ಮೈಸೂರು: ಅಯೋಧ್ಯೆ ರಾಮಲಲ್ಲಾನ ವಿಗ್ರಹ ಕೆತ್ತನೆಗೆ ಬಳಸಿರುವ ಶಿಲೆ ಸಿಕ್ಕ ಜಾಗದಲ್ಲಿ ರಾಮಮಂದಿರ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಲು ತೆರಳಿದ್ದ ಸಂಸದ ಪ್ರತಾಪ್ ಸಿಂಹ ಅವರಿಗೆ ದಲಿತ ಮುಖಂಡರು ಘೇರಾವ್ ಹಾಕಿದ ಘಟನೆ ನಡೆದಿದೆ.

ಮೈಸೂರಿನ ಹಾರೋಹಳ್ಳಿಯಲ್ಲಿ ಬಾಲರಾಮನ ಮೂರ್ತಿಗೆ ಕಲ್ಲು ಸಿಕ್ಕಿತ್ತು. ಶಿಲೆ ಸಿಕ್ಕ ಸ್ಥಳದಲ್ಲೇ ರಾಮಮಂದಿರ ನಿರ್ಮಾಣ ಮಾಡಲಾಗುವುದು ಎಂದು ಶಾಸಕ ಜಿ.ಟಿ.ದೇವೇಗೌಡ ತಿಳಿಸಿದ್ದರು.

ಅದರಂತೆ ಭೂಮಿ ಪೂಜೆಯಲ್ಲಿ ಪಾಲ್ಗೊಳ್ಳಲು ಸಂಸದ ಪ್ರತಾಪ್ ಸಿಂಹ ತೆರಳಿದ್ದವು. ಸಂಸದನಿಗೆ ದಲಿತ ಮುಖಂಡರು ಘೇರಾವ್ ಹಾಕಿದ್ದಾರೆ. ಸಂಸದ ಪ್ರತಾಪ್ ಸಿಂಹ ದಲಿತ ವಿರೋಧಿ ಎಂದು ಕೂಗಲಾಯಿತು. ಈ ವೇಳೆ ಬೇಸರದಿಂದ ಕಾರ್ಯಕ್ರಮದಿಂದ ಪ್ರತಾಪ್ ಸಿಂಹ ಹೊರಹೋದರು. ಹಾರೋಹಳ್ಳಿ ಗಲಾಟೆ ವಿಚಾರವಾಗಿ ಪ್ರತಿಕ್ರಿಯಿಸಿದ ಸಂಸದ ಪ್ರತಾಪ್ ಸಿಂಹ, ನಾನು ಈ ಕ್ಷಣಕ್ಕೂ ಮಹಿಷ ದಸರಾ ವಿರೋಧಿ. ಮಹಿಷಾ ದಸರಾ ವಿರೋಧ ಮಾಡಿದ್ದಕ್ಕೆ ಯಾರೋ ನಾಲ್ಕು ಜನ ಕಿಡಿಗೇಡಿಗಳು ಗಲಾಟೆ ಮಾಡಿದರು. ಕಾಂಗ್ರೆಸ್‌ನ ಪುಡಾರಿಗಳಿಂದ ಗಲಾಟೆ ನಡೆದಿದೆ ಎಂದು ಆರೋಪಿಸಿದರು.



ರಾಮ ಮಂದಿರ ಉದ್ಘಾಟನೆ: ಶ್ರೀ ರಾಮ ಸೀತಾ ಲಕ್ಷ್ಮಣರು ರಂಗೋಲಿ ಬಿಡಿಸಿ ಸಂಭ್ರಮಿಸಿದ ಭೌರಜ್ ನಾರಾಯಣ ಮಯಾನ್ನಾಚೆ (27). ತಾನಾಜಿ ಗಲ್ಲಿ, ಬಸವನ ಕುಡಚಿ ಬೆಳಗಾವಿ

# ಶ್ರೀರಾಮ ಹಾಗೂ ಶ್ರೀ ಮಹರ್ಷಿ ವಾಲ್ಮೀಕಿರವರ ಆರಾಧನೆ ನಿರಂತರ ಸಾಗಲಿ



ಖಾನಾಪೂರ : ಅಯೋಧ್ಯೆಯ ಭವ್ಯವಾದ ರಾಮಮಂದಿರ ದಲ್ಲಿ ಶ್ರೀ ರಾಮಲಲ್ಲಾ ಪ್ರತಿಷ್ಠಾಪನೆ ನಿಮಿತ್ತವಾಗಿ ಇಡಿ ದೇಶಾದ್ಯಂತ ರಾಮನ ಪೂಜೆ ನಡೆದಿದೆ. ಈ ಒಂದು ಸುವರ್ಣ ದಿನಕ್ಕಾಗಿ ಇಡಿ ದೇಶವೆ ಕಾಯುತ್ತಿತ್ತು ಈ ಒಂದು ಅದ್ಬುತ ದಿನದಂದು ತಾಲೂಕು ಕಾಟಗಳಿ ಗ್ರಾಮದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ರವರ ಮೂರ್ತಿ ಹಾಗೂ ಶ್ರೀರಾಮನ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ಪೂಜಾ ಕಾರ್ಯಕ್ರಮ ನೇರವೆರಿಸಲಾಯಿತು.

ಪ್ರಭು ಶ್ರೀರಾಮನನ್ನು ಹೇಗೆ ಭಕ್ತಿ ಯಿಂದ ಆರಾಧಿಸಲಾಗುತ್ತಿದೆ. ಅದೇ, ರೀತಿಯಾಗಿ ಶ್ರೀ ಮಹರ್ಷಿ ವಾಲ್ಮೀಕಿ ಋಷಿಗಳನ್ನು ಆರಾಧಿಸಬೇಕು. ಶ್ರೀ ಮಹರ್ಷಿ ವಾಲ್ಮೀಕಿ 24 ಸಾವಿರ ಶ್ಲೋಕಗಳಿಂದ 4 ಲಕ್ಷ 80 ಎಂಬತ್ತು ಸಾವಿರ ಶಬ್ದಗಳಿಂದ ರಾಮಾಯಣ ರಚಿಸಿ ರಾಮನ ಜನನ ಮತ್ತು ಏಕತೆಯನ್ನು ಇಡಿ ಜಗತ್ತಿಗೆ ಪರಿಚಿಯಿಸಿದ್ದು ಶ್ರೀ ಮಹರ್ಷಿ ವಾಲ್ಮೀಕಿಯವರು ಎಂದು ಯುವ ಹೋರಾಟಗಾರ ಮಹೇಶ ಶಿಗೀಹಳ್ಳಿ ತಿಳಿಸಿದರು.

ಈ ಸಂದರ್ಭದಲ್ಲಿ ನಾಗಪ್ಪ ನಾಯ್ಕ, ದಿಗಂಬರ ನಾಯ್ಕ್, ಮಂಜು ತಳವಾರ್, ಜಾನೇಶ್, ಸಾಗರ್, ಹನುಮಂತ, ಆಕಾಶ ಸರೀಕರ ಹಾಗೂ ಇತತರು ಇದ್ದರು.

# ಕನ್ನಡದ ಕಟ್ಟಾಳು ಡೆಪ್ಯುಟಿ ಚನ್ನಬಸಪ್ಪನವರು



ಬೆಳಗಾವಿ: ಕನ್ನಡ ಸಾಹಿತ್ಯ ಪರಿಷತ್ತು ಮತ್ತು ಕನ್ನಡ ಸಾಂಸ್ಕೃತಿಕ ಭವನದ ಕ್ಷೇಮಾಭಿವೃದ್ಧಿ ಸಂಘದ ಬೆಳಗಾವಿ ಜಿಲ್ಲೆಯ ಶತಮಾನ ಕಂಡ ಸಾಹಿತಿಗಳು ತಿಂಗಳ ಕಾರ್ಯಕ್ರಮ 7 ದಿ.ಡೆಪ್ಯುಟಿ ಚನ್ನಬಸಪ್ಪ ಅವರ ಬದುಕು ಬರಹ ಕುರಿತು ದಿ21.01.2024ರಂದು ಕನ್ನಡ ಭವನ ನೆಹರುನಗರದಲ್ಲಿ ಜರುಗಿತು .ಹೇಮಾವತಿ ಸೋನೊಳಿ ಅವರು ಉಪನ್ಯಾಸ ನೀಡುತ್ತಾ ಇವರ ಪೂರ್ಣಹೆಸರು ಚನ್ನಬಸಪ್ಪ ಬಸಲಿಂಗಪ್ಪ ಧಾರವಾಡ 1865ರಲ್ಲಿ ಅವರು ಪ್ರಾರಂಭಿಸಿದ "ಮಠಪತ್ರಿಕೆ"ಮೊದಲ ಸಂಚಿಕೆಯಲ್ಲಿ ಅವರು ಕರ್ನಾಟಕ ಸೀಮೆ ಎಂಬ ಪದವನ್ನು ಉಲ್ಲೇಖಿಸಿದ್ದಾರೆ 155ವರ್ಷಗಳ ಹಿಂದೆಯೇ ಸಮಗ್ರ ಕರ್ನಾಟಕದ ಕಲ್ಪನೆಯನ್ನಿಟ್ಟುಕೊಂಡು "ಕರ್ನಾಟಕ"ಎಂಬ ಪದ ಬಳಸಿರುವುದು ನಿಜಕ್ಕೂ ಕನ್ನಡಿಗರಾದ ನಮಗೆ ಹೆಮ್ಮೆಯ ಸಂಗತಿ ಕನ್ನಡದ ಡಿಂಡಿಮ ಬಾರಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದರು.

ಮುಖ್ಯ ಅತಿಥಿಗಳಾಗಿ ಸುಭಾಷ್ ಏಣಗಿ ಅವರು ಆಗಮಿಸಿದ್ದರು ಅತಿಥಿಗಳಾಗಿ ಎನ್ ಆರ್ ಠಕ್ಕಾಯಿ ಅವರುಮಾತನಾಡುತ್ತ ಕನ್ನಡ ಭೋದಿಸಲು ಕನ್ನಡ ಪಂಡಿತರಿಂದ ಪಠ್ಯ ಪೂರಕ ಸಾಮಗ್ರಿ ರಚಿಸಿ ಪ್ರಾಥಮಿಕ ಶಾಲೆಗಳಿಗೆ ಪೂರೈಸಿ ಕನ್ನಡ ಕಲಿಕೆಗೆ ಭದ್ರ ಭುನಾದಿ ಹಾಕಿದವರು.

ಡೆಪೂಟಿ ಚನ್ನಬಸಪ್ಪ ಎಂದು ತಿಳಿಸಿದರು ಪ್ರಾಸ್ತಾವಿಕವಾಗಿ ಎಂ ವೈ ಮೆಣಸಿನಕಾಯಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತ ಕಾರ್ಯದರ್ಶಿ ಜಿಲ್ಲೆಯಲ್ಲಿ ಸಮ್ಮೇಳನ ಮಾಡುತ್ತಿರುವ ಮಾಹಿತಿ ಕನ್ನಡ ಭವನ ನಿರ್ಮಾಣ ಕುರಿತು ಪ್ರಾಸ್ತಾವಿಕ ನುಡಿಗಳನ್ನಾಡಿದರು ಸುಧಾ ಪಾಟೀಲ ಉಪನ್ಯಾಸಕರ ಅತಿಥಿಗಳ ಪರಿಚಯ ಮಾಡಿದರು ಅಧ್ಯಕ್ಷತೆ ವಹಿಸಿದ ಮಂಗಲಾ ಮೆಟಗುಡ್ಡ ಅವರು ಬೆಳಗಾವಿ ಜಿಲ್ಲಾ ಸರ್ವಾಧ್ಯಕ್ಷರ ಭಾಷಣ ಪುಸ್ತಕ ಪ್ರಕಟಣೆ ಹಂತದಲ್ಲಿದ್ದು ಅದು ಪಿಎಚ್ಡಿ ಹಾಗೂ ವಿಧ್ಯಾರ್ಥಿಗಳಿಗೆ ಉಪಯೋಗವಾಗಲಿದೆ ಎಂದರು.

ಆಶಾ ಯಮನಮರ್ಡಿಇಂದಿರಾ ಮೋಟೆಬೆನ್ನೂರ ಹಾಗೂ ಸಂಗಡಿಗರು ನಾಡಗೀತೆ ಮತ್ತು ಕನ್ನಡ ದೀಪ ಹಾಡಿದರು.ನಿರೂಪಣೆ ಯನ್ನು ಮಲ್ಲಿಕಾರ್ಜುನ ಕೋಳಿ ಮಾಡಿದರು ಎಫ್ ವೈ ತಳವಾರ ಕಸಾಪ ಪ್ರತಿನಿಧಿ ಸ್ವಾಗತಿಸಿದರು ಭಾರತಿ ಮದಭಾವಿ ಸುರೇಶ ಹಂಜಿ ಪಾಂಡುರಂಗ ಎಲಿಗಾರ ದಯಾನಂದ ಧನವಂತ ರಾಜನಂದಾ ಘಾರ್ಗಿ ನರಸಿಂಗ ಕಮತೆ ಅರ್ಜುನ ಕಡೆಟ್ಟಿ ಪ್ರಭುದೇವ ಹಿರೇಮಠ ಡಾ ಅ ಬ ಇಟಗಿ ಜ್ಯೋತಿ ಮಾಳಿ ಶಾಂತಾ ಕಬ್ಬೂರ ಪಿ ಎಲ್ ಹೂಗಾರ ಪ್ರತಿಭಾ ಕಳ್ಳಿಮಠ ಬಸನಗೌಡ ಹುಲ್ಲೆಪ್ಪನ್ನವರ ಡಾ ಸುನಿಲಕುಮಾರ ವಿರಭದ್ರಪ್ಪ ಅಂಗಡಿ ಶಿವಾನಂದ ತಲ್ಲೂರ ಪ್ರವೀಣ ಕಡಬಿ ಎಂ ಬಾವಖಾನ ಪ್ರೊ ರಾಮಣ್ಣ ಸೊಗಲದ ಇತರರು ಉಪಸ್ಥಿತರಿದ್ದರು.

# ಕಾರ್ಮಿಕ ಇಲಾಖೆ: ಟ್ಯಾಪ್ ಟಾಪ್ ವಿತರಣೆ ಕಾರ್ಯಕ್ರಮ



ವಿದ್ಯಾರ್ಥಿಗಳಿಗೆ ಲ್ಯಾಪ್ ಟಾಪ್ ವಿತರಿಸಿದ ಸಚಿವ ಸತೀಶ ಜಾರಕಿಹೊಳಿ

ಬೆಳಗಾವಿ: ಕಾರ್ಮಿಕ ಇಲಾಖೆಯ ವತಿಯಿಂದ ಪಿಯುಸಿ ವ್ಯಾಸಂಗ ಮಾಡುತ್ತಿರುವ ಜಿಲ್ಲೆಯ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸೋಮವಾರ (ಜ.22) ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಸಾಂಕೇತಿಕವಾಗಿ ಲ್ಯಾಪ್ ಟಾಪ್ ವಿತರಣೆ ಮಾಡಿದರು.

ಈ ವೇಳೆ ಮಾತನಾಡಿದ ಸಚಿವರು ವಿದ್ಯಾರ್ಥಿಗಳಿಗೆ ನೀಡಿದ ಲ್ಯಾಪ್ ಟಾಪ್ ಸದ್ಬಳಕೆ ಆಗಬೇಕು. ಮಕ್ಕಳ ಶಿಕ್ಷಣಕ್ಕೆ ಅನುಕೂಲವಾಗುವ ನಿಟ್ಟಿನಲ್ಲಿ ಕಾರ್ಮಿಕ ಇಲಾಖೆ ಈ ಯೋಜನೆ ಜಾರಿಗೆ ತಂದಿದೆ. ಇದರ ಬಳಕೆ ಮೌಲ್ಯದಾಯಕವಾಗಿರಲಿ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಬೆಳಗಾವಿ ಉತ್ತರ ವಿಧಾನ ಸಭಾ ಮತ ಕ್ಷೇತ್ರದ ಶಾಸಕ ಆಸೀಫ್ (ರಾಜು) ಸೇಠ್ ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ, ಉಪ ಕಾರ್ಮಿಕ ಆಯುಕ್ತರಾದ ಅನ್ಸಾರಿ, ಕಾರ್ಮಿಕ ಅಧಿಕಾರಿ ತರುನ್ನಂ ಬೆಂಗಾಲಿ, ಮಲ್ಲಿಕಾರ್ಜುನ ಜಾಗೂರ್, ಕಾರ್ಮಿಕ ನಿರೀಕ್ಷಕರಾದ ರಮೇಶ ಕೆಸರೂರ, ರಾಜೇಶ ಅಸ್ನೋಟಿಕರ್ ಸೇರಿದಂತೆ ಮತ್ತಿತರು ಹಾಜರಿದ್ದರು.

# ಕೆಂಭಾವಿ ರಾಮಲಿಂಗೇಶ್ವರ ಬೆಟ್ಟ ಅಭಿವೃದ್ಧಿಯಾಗಲಿ

ವೀರಣ್ಣ ಕಲಕೇರಿ

ಕೆಂಭಾವಿ: ಅಯೋಧ್ಯೆಯಲ್ಲಿ ನೂತನವಾಗಿ ನಿರ್ಮಾಣಗೊಂಡ ರಾಮಮಂದಿರ ಉದ್ಘಾಟನೆಗೆ ಕ್ಷಣಗಣನೆ ಆರಂಭವಾಗಿದೆ. ಕರ್ನಾಟಕದಲ್ಲಿನ ಹಲವು ಪ್ರದೇಶಗಳು ಕೂಡ ಶ್ರೀರಾಮಚಂದ್ರನಿಗೆ ನಂಟುಕಟ್ಟಿಕೊಂಡಿವೆ ಎಂಬುವುದು ಆಯಾ ಪ್ರದೇಶದಲ್ಲಿನ ಕುರಹಗಳು ಮತ್ತು ಪೌರಾಣಿಕ ಕಥೆಗಳಿಂದ ತಿಳಿದು ಬರುತ್ತದೆ. ಆ ಹಿನ್ನೆಲೆಯಲ್ಲಿ ಕೆಂಭಾವಿ ಪಟ್ಟಣದ ಸೀಮಾಂತರ ಪ್ರದೇಶದಲ್ಲಿರುವ ರಾಮಲಿಂಗೇಶ್ವರ ಬೆಟ್ಟ ಸಹ ಒಂದಾಗಿದೆ.

ಶ್ರೀರಾಮನು ವನವಾಸ ಸಂದರ್ಭದಲ್ಲಿ ಅರಣ್ಯವಾಸಿಯಾಗಿ ತಾನು ತಣಿದ ಕೆಲವು ಸ್ಥಳಗಳಲ್ಲಿ ಶಿವನ ಆರಾಧನೆಗಾಗಿ ತಾನೆ ಲಿಂಗ ಸ್ಥಾಪನೆ ಮಾಡುತ್ತಾನೆ, ಅಂತಹ ಸ್ಥಳಗಳು ರಾಮಲಿಂಗ, ರಾಮಲಿಂಗೇಶ್ವರ ಎಂದು ಕರೆಯಲಾಗುತ್ತಿದೆ ಎಂಬ ಪ್ರತೀತಿ, ಪೌರಾಣಿಕ ಹಾಗೂ ಜನಪದ ವಾಣಿಗಳಿಂದ ತಿಳಿದು ಬರುವಂತೆ, ಕೆಂಭಾವಿ ಸೀಮಾಂತರಲ್ಲಿ ಕೆಂಭಾವಿ,



ಕಿರದಳ್ಳಿ, ನಗನೂರ ಹಾಗೂ ಪರಸನಹಳ್ಳಿ ನಾಲ್ಕು ಸೀಮೆಗಳು ಸಂಧಿಸುವ ಸ್ಥಳವಾದ ಬೆಟ್ಟಗಳ ಸಾಲಿನ ಮಧ್ಯ ಇರುವ ಈ ಕ್ಷೇತ್ರ ಪೌರಾಣಿಕ ಕಥೆ ಜನಪದ ವಾಣಿಗೆ ಪುಷ್ಠಿ ನಿಡುವಂತಿದೆ.

ಪೌರಾಣಿಕ ಹಾಗೂ ಜನಪದ ಹಿನ್ನೆಲೆ ಏನೇ ಇದ್ದರೂ ರಾಮಲಿಂಗನ ಈ ಬೆಟ್ಟ ಭಾವದೊಳು ಭಕ್ತಿ ಬೆರೆಯುವ ನಿಸರ್ಗ ಪ್ರಿಯರ ತಾಣ ಈ ಪ್ರದೇಶ. ಪಟ್ಟಣದಿಂದ ಕೂಗಳತೆಯಲ್ಲಿರುವ ಶ್ರೀರಾಮಲಿಂಗೇಶ್ವರ ಈ ಬೆಟ್ಟ, ನಿಸರ್ಗದ ಮಡಿಲಲ್ಲಿ ನೆಲೆನಿಂತ ನಿಸರ್ಗ ನಿರ್ಮಿತ ಸುಂದರ ಪ್ರೇಕ್ಷಣೀಯ ಸ್ಥಳವಾಗಿದೆ. ಇಲ್ಲಿನ ವಾತಾವರಣ ನಿಜಕ್ಕೂ ಅಹ್ಲಾದಕರ. ಇಲ್ಲಿ ಪ್ರಶಾಂತತೆಯ ಅನುಭವದ ಮಧ್ಯೆ ಹಕ್ಕಿಗಳ ಕಲರವ, ದುಂಬಿಗಳ ಝೇಂಕಾರ, ನೀರಿನ ಜುಳು ಜುಳು ನಾದ ಇವೆಲ್ಲವೂ ಬಾಹ್ಯ ಸೌಂದರ್ಯದಂತೆ, ಭಕ್ತಿ ಬೆರೆಸಿ ಅಂತರ್ ಸೌಂದರ್ಯದ ಅನುಭಾವ ತನ್ನಿಂದ ತಾನೇ ಭಾಸವಾಗುವುದಂತೂ ಸತ್ಯ.

ಇಲ್ಲಿ ಬೃಹತ್ ಬಂಡೆಗಳಿಂದ ನಿರ್ಮಾಣವಾದ ಸರಕಿನಲ್ಲಿ ರಾಮಲಿಂಗನ ಲಿಂಗ ಸ್ಥಾಪಿಸಲಾಗಿದ್ದು, ಬಂಡೆಗಲ್ಲಿಗೆ ಹೊಂದಿಕೊಂಡಂತೆ ಗೋಡೆ ಕಟ್ಟಿ ಗರ್ಭಗುಡಿ ನಿರ್ಮಿಸಲಾಗಿದೆ. ಈ ಕ್ಷೇತ್ರ ಹಲವು ಗ್ರಾಮಗಳ ಸಾಕಷ್ಟು ದೈವ ಭಕ್ತರ ಸಮೂಹವನ್ನು ಹೊಂದಿದ್ದು ಆಗಾಗ ಪೂಜೆ ಪ್ರಾರ್ಥನೆ ಬಹುಕಾಲದಿಂದ ಬಂದ ಸಂಪ್ರದಾಯ. ಈ ಪ್ರದೇಶಕ್ಕೆ ತಲುಪಲು ಕೆಂಭಾವಿ ಸುರಪುರ ರಾಜ್ಯ ಹೆದ್ದಾರಿಯಿಂದ ಮೂರ್ನಾಲ್ಕು ಕಿ.ಮಿ ವರೆಗೆ ಬೆಟ್ಟದ ಹಾದಿಯಲ್ಲಿ ಬೈಕ್ ಇಲ್ಲವೆ ಕಾಲ್ನಡಿಗೆ ಅನಿವಾರ್ಯವಾಗಿದೆ.

**ರಾಮಲಿಂಗ ಬೆಟ್ಟಕ್ಕೆ ಬೇಕಿದೆ ಕಾಯಕಲ್ಪ:**

ಇತಂಹ ಇತಿಹಾಸಯುಳ್ಳ ರಾಮಲಿಂಗ ಬೆಟ್ಟ ನಿರ್ಲಕ್ಷಕ್ಕೆ ಒಳಗಾಗಿ, ಅಭಿವೃದ್ಧಿ ಶೂನ್ಯವಾಗಿದೆ ಎನ್ನುವ ಮಾತಿದ್ದು, ಈ ನಿಟ್ಟಿನಲ್ಲಿ ಇದಕ್ಕೆ ಕಾಯಕಲ್ಪ ಕಲ್ಪಿಸುವುದು ಅಗತ್ಯವಾಗಿದೆ. ದೇವಸ್ಥಾನದ ಸಮಗ್ರ ಅಭಿವೃದ್ಧಿಯೊಂದಿಗೆ ಮೂಲಭೂತ ಸೌಕರ್ಯಗಳು ಒದಗಿಸಬೇಕಾಗಿದೆ. ಜನಪ್ರತಿನಿಧಿಗಳು ಮತ್ತು ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸಲಿ ಎನ್ನುವುದು ಭಕ್ತಾಧಿಗಳು ಒತ್ತಾಸೆಯಾಗಿದೆ.

# ವಿದ್ಯಾರ್ಥಿಗಳ ಉಜ್ವಲ ಭವಿಷ್ಯ ರೂಪಿಸಲು ಸದಾ ಬದ್ಧ: ಸಚಿವ ಸತೀಶ್ ಜಾರಕಿಹೊಳಿ

ಗೋಕಾಕ: ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕಾಗಿಯೇ ಸತೀಶ್ ಶುಗರ್ಸ್ ಅವಾರ್ಡ್ಸ್ ಸಾಂಸ್ಕೃತಿಕ ಕಾರ್ಯಕ್ರಮ ಮತ್ತೆ ಆರಂಭಿಸಿದ್ದು, ರಾಜ್ಯಮಟ್ಟದಲ್ಲಿ ವಿದ್ಯಾರ್ಥಿಗಳಿಗೆ ಅತ್ಯಂತ ಹೆಚ್ಚಿನ ಪ್ರೋತ್ಸಾಹ ನೀಡುವ ಕಾರ್ಯಕ್ರಮ ಇದಾಗಿದ್ದು, ಮುಂದೆಯೂ ನಿರಂತರವಾಗಿ ನಡೆಯಲಿದೆ ಎಂದು ಲೋಕೋಪಯೋಗಿ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಭರವಸೆ ನೀಡಿದರು.

ನಗರದ ವಾಲ್ಮೀಕಿ ಕ್ರೀಡಾಂಗಣದಲ್ಲಿ ಸತೀಶ್ ಜಾರಕಿಹೊಳಿ ಫೌಂಡೇಶನ್ ವತಿಯಿಂದ ಹಮ್ಮಿಕೊಂಡಿದ್ದ 20ನೇ ಸತೀಶ್ ಶುಗರ್ಸ್ ಅವಾರ್ಡ್ಸ್ ಕಾರ್ಯಕ್ರಮದ ಸಮಾರೂಪ ಸಮಾರಂಭದ ಅಧ್ಯಕ್ಷತೆ ವಹಿಸಿ, ವಾಲ್ಮೀಕಿ ಕ್ರೀಡಾಂಗಣದಲ್ಲಿ 1 ಕೋಟಿ ರೂ. ವೆಚ್ಚದಲ್ಲಿ ಅಳವಡಿಸಿದ್ದ ಹೈಮಾಸ್ಕ್ ವಿದ್ಯುತ್ ದೀಪ ಉದ್ಘಾಟಿಸಿ ಮಾತನಾಡಿದ ಅವರು, ಸತೀಶ್ ಶುಗರ್ಸ್ ಅವಾರ್ಡ್ಸ್ ಕಾರ್ಯಕ್ರಮದಿಂದ ನೂರಾರು ವಿದ್ಯಾರ್ಥಿಗಳು ರಾಜ್ಯ, ರಾಷ್ಟ್ರ ಮಟ್ಟದಲ್ಲಿ ತಮ್ಮ ಪ್ರತಿಭೆ ಪ್ರರ್ದಶಿಸಿ, ಇಂದು ನಟರಾಗಿ, ನಾಯಕ ನಟರಾಗಿ, ಸಂಗೀತ, ಕಾಮಿಡಿ ಕಾರ್ಯಕ್ರಮಗಳಲ್ಲಿ ಸೇರಿದಂತೆ ಟಿ.ವಿ ಮಾಧ್ಯಮದಲ್ಲಿ ಕಾಣಿಸಿಕೊಳ್ಳುತ್ತಿರುವುದು ಶ್ಲಾಘನೀಯ ಎಂದರು.

ನಾವು ಸಾಕಷ್ಟು ಮಹತ್ವದ ಕೆಲಸಗಳನ್ನು ಮಾಡಿದ್ದು, ರಾಜ್ಯ ಮಟ್ಟದಲ್ಲಿ ಇನ್ನು ಅನೇಕ ಅಭಿವೃದ್ಧಿ ಕಾರ್ಯಗಳಿಗೆ ಆದ್ಯತೆ ನೀಡಬೇಕಿದೆ. ಇನ್ನು ಮುಂದೆ ಸತೀಶ್ ಶುಗರ್ಸ್ ಅವಾರ್ಡ್ಸ್ ಸೇರಿದಂತೆ ನಮ್ಮ ಅಭಿವೃದ್ಧಿ ರಥವನ್ನು ಎಳೆಯುವ ಪ್ರಯತ್ನವನ್ನು ಪುತ್ರ ರಾಹುಲ್, ಪುತ್ರಿ ಪ್ರಿಯಂಕಾ ಮಾಡುತ್ತಾರೆ.

ಕಳೆದ ನಾಲ್ಕು ವರ್ಷಗಳಿಂದ ಅವರಿಬ್ಬರು ಸಮಾಜದಲ್ಲಿ ಸಾಮಾಜಿಕವಾಗಿ, ರಾಜಕೀಯವಾಗಿ ಅನೇಕ ಕಾರ್ಯಗಳನ್ನು ಮಾಡುತ್ತಿದ್ದು, ಈ ನಾಡಿನ ಜನತೆ ನಮಗೆ ನೀಡಿದ ಸಹಕಾರವನ್ನು ಅವರಿಗೂ ನೀಡಿ, ಶಕ್ತಿ ತುಂಬುವ ಕಾರ್ಯವನ್ನು ಮಾಡಬೇಕೆಂದು ಮನವಿ ಮಾಡಿದರು.



**ಗೋಕಾಕ ತಾಲೂಕಿನ ಸರ್ವಾಂಗೀಣ ಅಭಿವೃದ್ಧಿಗೆ ಬದ್ಧ:**

ಗೋಕಾಕ ತಾಲೂಕಿನ ಅಭಿವೃದ್ಧಿ ವಿಚಾರವಾಗಿ ಬಹಳಷ್ಟು ಕನಸುಗಳು ಇದ್ದು, ಒಂದೊಂದಾಗಿ ಅವುಗಳನ್ನು ಕ್ರಮೇಣವಾಗಿ ಕಾರ್ಯ ರೂಪಕ್ಕೆ ತರಲಾಗುವುದು. ಕ್ರೀಡಾಪಟುಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ನಗರದ ವಾಲ್ಮೀಕಿ ಕ್ರೀಡಾಂಗಣದಲ್ಲಿ 1 ಕೋಟಿ ರೂ. ವೆಚ್ಚದಲ್ಲಿ ಹೈಮಾಸ್ಕ್ ವಿದ್ಯುತ್ ದೀಪಗಳನ್ನು ಅಳವಡಿಸಲಾಗಿದೆ. ಇದು ನನ್ನ ಬಹುದಿನಗಳ ಕನಸಾಗಿತ್ತು. ಕ್ರೀಡಾಪಟುಗಳ ಬೇಡಿಕೆಯೂ ಆಗಿತ್ತು. ಇಂದು ಹೈಮಾಸ್ಕ್ ವಿದ್ಯುತ್ ದೀಪಗಳನ್ನು ಉದ್ಘಾಟಿಸುತ್ತಿದ್ದು, ಹೊನಲು ಬೆಳಕಿನಲ್ಲಿ ಆಟ ಆಡಲು ಕ್ರೀಡಾಪಟುಗಳಿಗೆ ಅನುಕೂಲವಾಗಲಿದೆ ಎಂದರು.

ಇನ್ನು ನಗರದಲ್ಲಿ ಲೋಕೋಪಯೋಗಿ ಇಲಾಖೆಯಿಂದ 1.50 ಕೋಟಿ ರೂ. ವೆಚ್ಚದಲ್ಲಿ ಸುಸಜ್ಜಿತ ಡಿಜಿಟಲ್ ಗ್ರಂಥಾಲಯ ಅತೀ ಶೀಘ್ರದಲ್ಲೇ ಪ್ರಾರಂಭಿಸಲಾಗುವುದು, ನಗರದ ಬಸವೇಶ್ವರ ವೃತ್ತದಿಂದ ಯೋಗಿಕೊಳ್ಳ ರಸ್ತೆ , ಎ.ಪಿ.ಎಂ.ಸಿ ರಸ್ತೆ ಸೇರಿದಂತೆ ಅನೇಕ ರಸ್ತೆಗಳನ್ನು ಲೋಕೋಪಯೋಗಿ ಇಲಾಖೆ ವತಿಯಿಂದ ಅಭಿವೃದ್ಧಿ ಮಾಡಲಾಗುವುದು. ವಕೀಲರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ನಗರದಲ್ಲಿ 2.50 ಕೋಟಿ ರೂ. ವೆಚ್ಚದಲ್ಲಿ ವಕೀಲರ ಭವನ ನಿರ್ಮಿಸಲಾಗುವುದಲ್ಲದೇ ಬೆಳಗಾವಿ ಜಲ್ಲೆ ಸೇರಿದಂತೆ ಗೋಕಾಕ ತಾಲೂಕಿನ ಸರ್ವಾಂಗೀಣ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುವುದು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ 20ನೇ ಸತೀಶ್ ಶುಗರ್ಸ್ ಅವಾರ್ಡ್ಸ್ ಕಾರ್ಯಕ್ರಮದಲ್ಲಿ ಸಮೂಹ ನೃತ್ಯ, ಗಾಯನ ಸ್ವರ್ಧೆಯಲ್ಲಿ ಪಾಲ್ಗೊಂಡು ತಮ್ಮ ಪ್ರತಿಭೆ ಪ್ರರ್ದಶಿಸಿ, ಪ್ರಥಮ, ದ್ವಿತಿಯ, ತೃತೀಯ ಹಾಗೂ ಸಮಾಧಾನಕರ ಸ್ಥಾನ ಪಡೆದ ಪ್ರಾಥಮಿಕ, ಪ್ರೌಢಶಾಲೆ, ಕಾಲೇಜು ವಿದ್ಯಾರ್ಥಿಗಳಿಗೆ ಬಹುಮಾನ ಹಾಗೂ ನಗದನ್ನು ಸಚಿವ ಸತೀಶ್ ಜಾರಕಿಹೊಳಿ ಅವರು ಸೇರಿದಂತೆ ಗಣ್ಯರು ವಿತರಿಸಿದರು.

ಇದೇ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಶಾಸಕರಾದ ವಿಶ್ವಾಸ ವೈದ್ಯ, ಬಾಬಾ ಸಾಹೇಬ್ ಪಾಟೀಲ್, ಯುವ ನಾಯಕರಾದ ರಾಹುಲ್ ಜಾರಕಿಹೊಳಿ, ಸನ್ನತ್ ಜಾರಕಿಹೊಳಿ, ಸತೀಶ್ ಶುಗರ್ಸ್ ಲಿಮಿಟೆಡ್ ವ್ಯವಸ್ಥಾಪಕ ನಿರ್ದೇಶಕಿ ಪ್ರಿಯಂಕಾ ಜಾರಕಿಹೊಳಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಹೇಶ ಕೋಣಿ, ಜಿಲ್ಲಾ ಹಿಂದುಳಿದ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣಾಧಿಕಾರಿ ಬಸವರಾಜ ಗಲಗಲಿ, ಮೂಡಲಗಿ ಬಿಇಓ ಅಜೀತ್ ಮನ್ನಿಕೇರಿ, ಗೋಕಾಕ ಬಿಇಓ ಜಿ.ಬಿ. ಬಳಿಗಾರ, ವಿರೇಶ ದೊಡ್ಡಮನಿ, ಸಂಘಟಕ ರಿಯಾಜ ಚೌಗಲಾ ಸೇರಿದಂತೆ ಅಪಾರ ಸಂಖ್ಯೆಯ ಗಣ್ಯರು, ಸಾರ್ವಜನಿಕರು ಉಪಸ್ಥಿತರಿದ್ದರು.

## ಡಾ. ಪ್ರಭಾಕರ್ ಕೋರೆ ಅಯೋಧ್ಯೆಯ ಶ್ರೀ ರಾಮಲಲ್ಲ ಪ್ರಾಣ ಪ್ರತಿಷ್ಠಾಪನ ಸಮಾರಂಭ



ಬೆಳಗಾವಿ: ಕೆಎಲ್ಇ ಸಂಸ್ಥೆಯ ಕಾರ್ಯಧ್ಯಕ್ಷರಾದ ಡಾ. ಪ್ರಭಾಕರ್ ಕೋರೆ ಅವರು ಅಯೋಧ್ಯೆಯ ಶ್ರೀ ರಾಮಲಲ್ಲ ಪ್ರಾಣ ಪ್ರತಿಷ್ಠಾಪನ ಸಮಾರಂಭದಲ್ಲಿ ಪಾಲ್ಗೊಂಡ ಮಧುರ ಕ್ಷಣ.

ಈ ಸಂದರ್ಭದಲ್ಲಿ ಅವರು ಮಾತನಾಡಿ ಪ್ರತಿಯೊಬ್ಬ ಹಿಂದೂ ಕೂಡ ಅಭಿಮಾನ ಪಡಬೇಕು. ಶ್ರೀ ರಾಮ ನಮ್ಮ ಸಂಸ್ಕೃತಿಯ ಅಸ್ಮಿತೆ. 500 ವರ್ಷಗಳ ಹಿಂದುಗಳ ತಪಸ್ಸು ಇಂದು ಫಲಿಸಿದೆ. ಭವ್ಯವಾದ ರಾಮಮಂದಿರವನ್ನು ಕಣ್ಣು ತುಂಬಿಕೊಳ್ಳುವುದೇ ಒಂದು ಅಮೃತ ಳಿಗೆ. ಭಾರತ ದರ್ಶನವನ್ನು ಇಲ್ಲಿ ಕಾಣಬಹುದು. ಅಸಂಖ್ಯಾ ಹಿರಿಯರ ಹೋರಾಟದ ತ್ಯಾಗದ ಪ್ರತಿಫಲವಾಗಿ ಶ್ರೀ ರಾಮನ ಭಕ್ತಿಯೆ ಇಲ್ಲಿ ಮೈಯೆತ್ತು ನಿಂತು ಕೊಂಡಿದೆ ಎಂದು ಅವರು ಹೇಳಿದರು.

ಇಂತಹ ಪವಿತ್ರ ಕ್ಷಣದಲ್ಲಿ ಪಾಲ್ಗೊಂಡಿರುವುದು ನನಗೆ ಅತ್ಯಂತ ಹೆಮ್ಮೆ ಹಾಗು ಸಂತೋಷ ಉಂಟು ಮಾಡಿದೆ. ಪ್ರತಿಯೊಬ್ಬ ಭಾರತೀಯನೂ ಕೂಡ ರಾಮನ ದರ್ಶನವನ್ನು ಪಡೆಯಬೇಕು. ನಮ್ಮ ಸನಾತನ ಸಂಸ್ಕೃತಿಯಲ್ಲಿ ಧರ್ಮ ಅಧ್ಯಾತ್ಮಗಳು ಬೆರೆತುಕೊಂಡಿವೆ. ರಾಮಾಯಣ ಅಂತಹ ಮೌಲ್ಯಗಳ ಒಂದು ದರ್ಶನವೆಂದು ಹೇಳಿದರು.

## ಪರಿಹಾರ ವಿತರಣೆ; ಸೂಕ್ತ ದಾಖಲೆ ಸಲ್ಲಿಸಲು ಸಚಿವ ಸತೀಶ ಜಾರಕಿಹೊಳಿ ಸೂಚನೆ

### ಮಾಸ್ತಿಹೊಳಿ ಗ್ರಾಮದ ಭೂ ಸ್ವಾಧೀನ ಪ್ರಕ್ರಿಯೆ ಪ್ರಗತಿ ಪರಿಶೀಲನಾ ಸಭೆ

ಬೆಳಗಾವಿ: ಕರ್ನಾಟಕ ನೀರಾವರಿ ನಿಗಮದಿಂದ ಮಾಸ್ತಿಹೊಳಿ ಗ್ರಾಮದ ಭೂ ಸ್ವಾಧೀನ ಪ್ರಕ್ರಿಯೆ ಸಂಬಂಧಿಸಿದಂತೆ ಪರಿಹಾರ ವಿತರಿಸದ ರೈತರಿಗೆ ಕೂಡಲೇ ಪರಿಹಾರ ನೀಡಬೇಕು. ಒಂದು ವೇಳೆ ಪರಿಹಾರ ನೀಡಿದಲ್ಲಿ ಅದರ ದಾಖಲೆಗಳನ್ನು ನಿಗದಿತ ದಿನಾಂಕದೊಳಗೆ ಸಲ್ಲಿಸಬೇಕು ಎಂದು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಸೋಮವಾರ ನಡೆದ ಮಾಸ್ತಿಹೊಳಿ ಗ್ರಾಮದ ಭೂ ಸ್ವಾಧೀನ ಪ್ರಕ್ರಿಯೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಿಡಕಲ್ ಜಲಾಶಯದ ಹಿನ್ನೀರಿನಲ್ಲಿ ಮುಳುಗಡೆಯಾದ ಮಾಸ್ತಿಹೊಳಿ ಗ್ರಾಮದಲ್ಲಿನ ಜಮೀನುಗಳ ಮಾಲೀಕರಿಗೆ ಈಗಾಗಲೇ ಪರಿಹಾರ ನೀಡಲಾಗಿದೆ. ಇನ್ನೂ ಕೆಲವು ರೈತರಿಗೆ ಪರಿಹಾರ ವಿತರಿಸಿಲ್ಲ ಎಂದು ಕೆಲವರು ಮನವಿಗಳನ್ನು ನೀಡುತ್ತಿದ್ದಾರೆ. ಆದರೆ ನಿಗಮದಿಂದ ಪರಿಹಾರ ವಿತರಣೆ ಮಾಡಲಾಗಿದೆ ಎಂದು ವರದಿ ಸಲ್ಲಿಸಲಾಗಿದೆ. ಇದನ್ನು ರೈತರು ಒಪ್ಪುತ್ತಿಲ್ಲ ಪೇಮೆಂಟ್ ಆಗಿರುವ ಕುರಿತು ನಿಗಮದಲ್ಲಿ ಯಾವುದೇ ದಾಖಲೆಗಳಿಲ್ಲ ಎಂದು ತಿಳಿಸಿದರು.



49 ಎಕರೆ 32 ಗುಂಟೆ ಭೂ ಸ್ವಾಧೀನ ಪಡಿಸಿಕೊಂಡು ರೈತರಿಗೆ ಪೇಮೆಂಟ್ ಆಗಿರುವ ಕುರಿತು ದಾಖಲೆ ಇಲ್ಲ. ಫೆ.28 ರಂದು ಮತ್ತೆ ಭೂ ಸ್ವಾಧೀನಕ್ಕೆ ಸಂಬಂಧಿಸಿದಂತೆ ಸಭೆ ಕರೆಯಲಾಗುವುದು ಅಷ್ಟರೊಳಗೆ ಚೆಕ್ ನಂಬರ್, ಸ್ವೀಕೃತಿ ಪ್ರತಿ ಸೇರಿದಂತೆ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು ಎಂದು ಸಚಿವ ಸತೀಶ ಜಾರಕಿಹೊಳಿ ಸೂಚನೆ ನೀಡಿದರು.

116 ಸರ್ವೇ ನಂಬರ್ ಮೊದಲು ಅರಣ್ಯ ಇಲಾಖೆಯ ಜಾಗೆಯಾಗಿದ್ದು, ಹಿಡಕಲ್ ಜಲಾಶಗಳಲ್ಲಿ ಮುಳುಗಡೆ ಜಮೀನು ಹೊಂದಿದ ರೈತರಿಗೆ ಉಳುಮೆ ಮಾಡಲು ನೀಡಲಾಗಿದೆ. ನೀರಾವರಿ ನಿಗಮದಿಂದ 2009 ರಲ್ಲಿ ಸಮೀಕ್ಷೆ ನಡೆಸಿ, ರೈತರಿಗೆ ಜಮೀನು ನೀಡಲಾಗಿದೆ. ಅದರಲ್ಲಿ ಇನ್ನೂ 12 ಜನರಿಗೆ ಜಮೀನು ನೀಡಬೇಕಾಗಿದೆ ಎಂದು ರೈತರು ಮನವಿ ಮಾಡಿಕೊಂಡರು.

ನೀರಾವರಿ ನಿಗಮದಲ್ಲಿ ಯಾವುದೇ ಸರಿಯಾದ ದಾಖಲೆಗಳಿಲ್ಲ. ರೈತರಿಗೆ ಪರಿಹಾರ ಕೂಡ ವಿತರಿಸಿಲ್ಲ ಜಿಲ್ಲಾಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸ್ಥಳಕ್ಕೆ ತೆರಳಿ ಪರಿಶೀಲನೆ ನಡೆಸಬೇಕು. ಒಂದು ವೇಳೆ ಅಧಿಕಾರಿಗಳು ನಿರ್ಲಕ್ಷ್ಯ ಧೋರಣೆ ತೋರಿದರೆ ಪ್ರತಿಭಟನೆ ನಡೆಸಲಾಗುವುದು ಎಂದು ರೈತ ಮುಖಂಡ ಬಾಳೇಶ್ ಅವರು ಸಭೆಯಲ್ಲಿ ತಿಳಿಸಿದರು.

ಜಲಾಶಯದ ನೀರು ಬರಲ್ಲ ಎಂದು ವರದಿ ನೀಡಿದ ಜಮೀನುಗಳಿಗೆ ಕೂಡ ನೀರು ನುಗ್ಗುತ್ತಿದೆ. ರೈತರ ಉಳುಮೆಗೆ ನೀಡಲಾದ ಜಮೀನಿನಲ್ಲಿ ಪೂರ್ಣ ನೀರಿನ ಪ್ರಮಾಣ ಇದೆ ಅದನ್ನು ಪರಿಶೀಲನೆ ನಡೆಸಬೇಕು. ನಿಗಮದಿಂದ ಪರಿಹಾರ ನೀಡಿದ ಕುರಿತು ದಾಖಲೆಗಳಿಲ್ಲ ಹಾಗಾಗಿ ಕೂಡಲೇ ಪರಿಹಾರ ವಿತರಿಸಲು ಕ್ರಮ ವಹಿಸಬೇಕು ಅಥವಾ ಅಗತ್ಯ ದಾಖಲೆ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ನೀರಾವರಿ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬೆಳಗಾವಿ ಉತ್ತರ ವಿಧಾನ ಸಭಾ ಮತ ಕ್ಷೇತ್ರದ ಶಾಸಕ ಆಸೀಫ್ (ರಾಜು) ಸೇಠ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ, ವಿಶೇಷ ಜಿಲ್ಲಾಧಿಕಾರಿ ಗೀತಾ ಕೌಲಗಿ, ಭೂದಾಖಲೆಗಳ ಇಲಾಖೆಯ ಜಂಟಿ ನಿರ್ದೇಶಕರಾದ ನಜ್ಮಾ ಪೀರಜಾದೆ, ಬೆಳಗಾವಿ ಉಪವಿಭಾಗಾಧಿಕಾರಿ ಶ್ರವಣ ನಾಯಕ, ಮಹಾನಗರ ಪಾಲಿಕೆ ಉಪ ಆಯುಕ್ತೆ ರೇಷ್ಮಾ ತಾಳಿಕೋಟಿ, ಕರ್ನಾಟಕ ನೀರಾವರಿ ನಿಗಮ ನಿಯಮಿತದ ಮುಖ್ಯ ಇಂಜಿನಿಯರ್, ಕಂದಾಯ ಇಲಾಖೆ ಹಾಗೂ ನೀರಾವರಿ ಇಲಾಖೆಯ ಅಧಿಕಾರಿಗಳು ಸೇರಿದಂತೆ ರೈತ ಮುಖಂಡರು ಸಭೆಯಲ್ಲಿ ಉಪಸ್ಥಿತರಿದ್ದರು.

## ಶ್ರೀರಾಮ ಉತ್ಸವದಲ್ಲಿ ಭಾಗಿಯಾದ ಚನ್ನರಾಜ ಹಟ್ಟಿಹೊಳಿ

ಬೆಳಗಾವಿ: ಶ್ರೀರಾಮ ನಮ್ಮೆಲ್ಲರ ಆರಾಧ್ಯ ದೈವ. ರಾಮ ನಮ್ಮೆಲ್ಲರ ಹೃದಯದಲ್ಲಿದ್ದಾನೆ. ಅಯೋಧ್ಯೆಯಲ್ಲಿ ಪ್ರಭು ಶ್ರೀರಾಮಚಂದ್ರ ಪ್ರಾಣ ಪ್ರತಿಷ್ಠಾಪನೆ ಹಾಗೂ ಭವ್ಯ ಶ್ರೀರಾಮ ಮಂದಿರದ ಲೋಕಾರ್ಪಣೆಯ ಹಿನ್ನೆಲೆಯಲ್ಲಿ ಇಂದು ಹಮ್ಮಿಕೊಂಡಿರುವ ಈ ಶ್ರೀರಾಮ ಉತ್ಸವದಲ್ಲಿ ಅತ್ಯಂತ ಭಕ್ತಿ ಮತ್ತು ಉತ್ಸಾಹದಿಂದ ಭಾಗವಹಿಸಿದ್ದೇನೆ ಎಂದು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಹೇಳಿದರು.

ತಾರಿಹಾಳ ಗ್ರಾಮದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಶ್ರೀರಾಮ ಉತ್ಸವದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ನಾವು ದೈವೀ ಭಕ್ತರು. ರಾಮಮಂದಿರ ಸೇರಿದಂತೆ ನೂರಾರು ಮಂದಿರಗಳಿಗೆ ನಮ್ಮಿಂದಾದ ನೆರವು ನೀಡಿದ್ದೇವೆ. ಬೆಳಗಾವಿ



ಗ್ರಾಮೀಣ ಕ್ಷೇತ್ರದಲ್ಲಿ 110ಕ್ಕೂ ಹೆಚ್ಚು ದೇವಸ್ಥಾನಗಳ ಜೀರ್ಣೋದ್ಧಾರ ಮತ್ತು ನಿರ್ಮಾಣ ಮಾಡಲು ಸಹಾಯ ಮಾಡಿದ್ದೇವೆ. ಮುಂದಿನ ದಿನಗಳಲ್ಲಿ ಅಯೋಧ್ಯೆ ರಾಮಮಂದಿರಕ್ಕೆ ತೆರಳಿ ರಾಮನ ದರ್ಶನ ಮತ್ತು ಆಶೀರ್ವಾದ ಪಡೆಯಲಾಗುವುದು ಎಂದು ಚನ್ನರಾಜ ಹಟ್ಟಿಹೊಳಿ ತಿಳಿಸಿದರು.

ಉತ್ತಮ ರೀತಿಯಲ್ಲಿ ಶ್ರೀರಾಮ ಉತ್ಸವ ಆಯೋಜಿಸಿದ್ದಕ್ಕಾಗಿ ಗ್ರಾಮಸ್ಥರನ್ನು ಅಭಿನಂದಿಸಿದ ಚನ್ನರಾಜ, ಜನರ ಭಾವನೆಗಳ ಜೊತೆಗೆ ನಾವಿದ್ದೇವೆ ಎಂದು ಭರವಸೆ ನೀಡಿದರು. ಈ ಸಮಯದಲ್ಲಿ ಪ್ರಮೋದ್ ಜಾಧವ್, ಗಜಾನನ ನಾಯಿಕ್, ಯಲ್ಲೇಶ್ ಜೋಗನ್ನವರ, ಸಿದ್ದಪ್ಪ ಖನಗಾಂವಕರ್, ಯಲ್ಲಪ್ಪ ಗೌಂಡಾಡಕರ್, ಈರಪ್ಪ ಭೊಮನ್ನವರ್, ಬಸವರಾಜ ತಳವಾರ, ನಾಮದೇವ್ ಜೊಗನ್ನವರ್, ಅಡಿವೆಪ್ಪ ರಾಗಿಪಾಟೀಲ, ಬಸವರಾಜ ವಾಣಿ, ಅಡಿವೆಪ್ಪ ಜೊಗನ್ನವರ್, ಗೀತಾ ತಳವಾರ, ನಾಗಯ್ಯ ಪೂಜಾರ, ಲಕ್ಷ್ಮಣ ಮುಚ್ಚಂಡಿ, ನಾಗಪ್ಪ ತಳವಾರ, ಗುರುಸಿದ್ದಯ್ಯ ಪೂಜಾರ, ಗ್ರಾಮದ ಪ್ರಮುಖರು, ಸಿದ್ದಯ್ಯ ಸ್ವಾಮಿ, ಯಲ್ಲಣ್ಣ ಚಿಕ್ಕಲಕಿ ಇದ್ದರು.

## ಚಿಕ್ಕೋಡಿಯ ಚುನಾವಣೆ ಕೌಂಟಿಂಗ್ ಕೇಂದ್ರಗಳನ್ನು ಪರಿಶೀಲಿಸಿದ ಜಿ.ಪಂ ಸಿಇಒ ರಾಹುಲ ಶಿಂಧೆ

ಬೆಳಗಾವಿ: ಚಿಕ್ಕೋಡಿ ಲೋಕಸಭಾ ಚುನಾವಣೆಯನ್ನು ಅಚ್ಚುಕಟ್ಟಾಗಿ ಹಾಗೂ ಯಾವುದೇ ತೊಂದರೆ ಬರದ ಹಾಗೆ ಕೆಲಸವನ್ನು ಮಾಡಬೇಕೆಂದು ಅಧಿಕಾರಿಗಳಿಗೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ ಶಿಂಧೆ ಸೂಚಿಸಿದರು.

ಚಿಕ್ಕೋಡಿ ತಾಲೂಕಿಗೆ ಭೇಟಿ ನೀಡಿ ಮುಂಬರುವ ಲೋಕಸಭಾ ಚುನಾವಣೆಯ ಕುರಿತು ಯುವ ಮತದಾರರ, ಜನಸಂಖ್ಯೆಯ, ಲಿಂಗಾನುಪಾತ ಮಾಹಿತಿಯನ್ನು ಅಧಿಕಾರಿಗಳಿಂದ ಸಂಗ್ರಹಿಸಿ ಉತ್ತಮವಾಗಿ ಕಾರ್ಯನಿರ್ವಹಿಸಬೇಕೆಂದು ಸೂಚಿಸಿದರು ಹಾಗೂ ಆರ್.ಡಿ ಕಾಲೇಜಿನ ಮಾಸ್ಟರಿಂಗ ಮತ್ತು ಡಿ ಮಾಸ್ಟರಿಂಗ ಕೊಠಡಿಗಳನ್ನು ಮತ್ತು ಕೌಂಟಿಂಗ್ ಕೇಂದ್ರಗಳನ್ನು




ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಉಪವಿಭಾಗ ಅಧಿಕಾರಿಗಳಾದ ಎಸ್.ಎಸ್.ಸಂಪಗಾಂವಿ, ತಹಶೀಲ್ದಾರರಾದ ಸಿ.ಎಸ್. ಕುಲಕರ್ಣಿ, ಕಾರ್ಯನಿರ್ವಾಹಕ ಅಧಿಕಾರಿಗಳಾದ ಎಸ್.ಎಸ್.ಕಾದ್ರೋಳ್ಳಿ, ಸಹಾಯಕ ನಿರ್ದೇಶಕರು (ಗ್ರಾ.ಉ ಮತ್ತು ಪಂ.ರಾ) ಹಾಗೂ ತಹಶೀಲ್ದಾರ ಮತ್ತು ತಾಲೂಕ ಪಂಚಾಯತಿಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಬನ್ಸಾಲ್ ವೈರ್ ಇಂಡಸ್ಟ್ರೀಸ್ ಸೆಬಿಗೆ ಡಿಆರ್‌ಹೆಚ್‌ಪಿ ಸಲ್ಲಿಕೆ

ಹುಬ್ಬಳ್ಳಿ: ಬನ್ಸಾಲ್ ವೈರ್ ಇಂಡಸ್ಟ್ರೀಸ್ ಲಿಮಿಟೆಡ್, ಅತಿದೊಡ್ಡ ಸ್ಟೇನ್‌ಲೆಸ್ ಸ್ಟೀಲ್ ತಂತಿ ಉತ್ಪಾದನಾ ಕಂಪನಿ ಮತ್ತು ಭಾರತದಲ್ಲಿ ಎರಡನೇ ಅತಿದೊಡ್ಡ ಸ್ಟೀಲ್ ತಂತಿ ಉತ್ಪಾದನಾ ಕಂಪನಿಯಾಗಿದ್ದು, 2023 ರ ಹಣಕಾಸು ವರ್ಷದಲ್ಲಿ ಕ್ರಮವಾಗಿ 72,176 ಮಿಲಿಯನ್ ಟನ್ ಮತ್ತು 206,466 ಮಿಲಿಯನ್ ಟನ್ ಉತ್ಪಾದನೆಯೊಂದಿಗೆ, 20% ಮತ್ತು ಅಂದಾಜು 4% ಮಾರುಕಟ್ಟೆ ಪಾಲನ್ನು ಪ್ರತಿನಿಧಿಸುತ್ತದೆ. ಕ್ರಮವಾಗಿ. ಐಪಿಓ (ಆರಂಭಿಕ ಸಾರ್ವಜನಿಕ ಕೊಡುಗೆ) ಗಾಗಿ ಜನವರಿ 18, 2024 ರಂದು ಮಾರುಕಟ್ಟೆ ನಿಯಂತ್ರಕ ಸೆಬಿಗೆ ಕರಡು ವಿವರಣಾ ಪುಸ್ತಿಕೆ ಸಲ್ಲಿಸಿದೆ.

ಈ ಕೊಡುಗೆಯು ತಲಾ ರೂಪಾಯಿ 5/- ರ ಮುಖಬೆಲೆಯ ಈಕ್ವಿಟಿ ಷೇರುಗಳ ತಾಜಾ ವಿತರಣೆಯನ್ನು ಒಳಗೊಂಡಿದ್ದು 7,450 ಮಿಲಿಯನ್ [745 ಕೋಟಿ] ವರೆಗೆ ಹಣ ಸಂಗ್ರಹಿಸಲಿದೆ.

ಐಪಿಓ ನಿಂದ ಬರುವ ನಿವ್ವಳ ಆದಾಯವನ್ನು ಮರುಪಾವತಿಗೆ ಅಥವಾ ಕಂಪನಿ ಮತ್ತು ಅದರ ಅಂಗಸಂಸ್ಥೆಯಿಂದ ಪಡೆದ ಕೆಲವು ಬಾಕಿ ಸಾಲಗಳ ಎಲ್ಲಾ ಅಥವಾ ಒಂದು ಭಾಗವನ್ನು ಪೂರ್ವಪಾವತಿಗೆ ಬಳಸಿಕೊಳ್ಳಲು ಕಂಪನಿಯು ಉದ್ದೇಶಿಸಿದೆ ; ಕಂಪನಿ ಮತ್ತು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗಾಗಿ ಕಾರ್ಯನಿರತ ಬಂಡವಾಳದ ಅಗತ್ಯತೆಗಳಿಗೆ ಈ ಹಣವನ್ನು ಬಳಸಿಕೊಳ್ಳಲಿದೆ

ಬನ್ಸಾಲ್ ವೈರ್ ಇಂಡಸ್ಟ್ರೀಸ್ 1985 ರಲ್ಲಿ ಸ್ಥಾಪಿಸಲಾಯಿತು ಮತ್ತು ಸಂಯೋಜನೆಯ ನಂತರ, ಕಂಪನಿಯು ಗುಣಮಟ್ಟದ ಉತ್ಪನ್ನಗಳನ್ನು ಗ್ರಾಹಕರಿಗೆ ವಿತರಿಸಿದೆ.

ಉಕ್ಕಿನ ತಂತಿ ಉದ್ಯಮದಲ್ಲಿ ಸ್ಥಾಪಿತ ಗುರುತನ್ನು ಸೃಷ್ಟಿಸಿದೆ. 38 ವರ್ಷಗಳ ಪರಂಪರೆಯೊಂದಿಗೆ, ಕಂಪನಿಯು ತನ್ನ ವೈವಿಧ್ಯಮಯ ಉತ್ಪಾದನೆಗಳೊಂದಿಗೆ ಹೆಮ್ಮೆ ಪಡುತ್ತದೆ, ಆಟೋಮೋಟಿವ್, ಸಾಮಾನ್ಯ ಎಂಜಿನಿಯರಿಂಗ್, ಮೂಲಸೌಕರ್ಯ, ಹಾರ್ಡ್‌ವೇರ್, ಗ್ರಾಹಕ ಬಾಳಿಕೆ ಬರುವ ವಸ್ತುಗಳು, ವಿದ್ಯುತ್ ಮತ್ತು ಪ್ರಸರಣ, ಕೃಷಿ ಮತ್ತು ಸ್ವಯಂ ಚಾಲಿತ ಮುಂತಾದ ವ್ಯಾಪಕ ಶ್ರೇಣಿಯ ಅವಶ್ಯಕತೆಗಳನ್ನು ಪೂರೈಸುತ್ತದೆ.

ಕಂಪನಿಯು ವಾರ್ಷಿಕ 259,000 ಮೆಟ್ರಿಕ್ ಟನ್ ಸಾಮರ್ಥ್ಯದ ಸೌಮ್ಯ ಉಕ್ಕು, ಹೆಚ್ಚಿನ ಇಂಗಾಲ ಮತ್ತು ಸ್ಟೇನ್‌ಲೆಸ್ ಸ್ಟೀಲ್ ತಂತಿಗಳನ್ನು ಅದರ ಅಸ್ತಿತ್ವದಲ್ಲಿರುವ ನಾಲ್ಕು ಉತ್ಪಾದನಾ ಸೌಲಭ್ಯಗಳಲ್ಲಿ ಸ್ಥಾಪಿಸಿದೆ. ಘಾಜಿಯಾಬಾದ್, ಹರಿಯಾಣ. ಕಂಪನಿಯು ಭಾರತದ ದಾದ್ರಿಯಲ್ಲಿ ಭಾರತದ ಅತಿ ದೊಡ್ಡ ಸಿಂಗಲ್‌ಲೊಕೇಶನ್ ಸ್ಟೀಲ್ ವೈರ್ ಉತ್ಪಾದನಾ ಸೌಲಭ್ಯವನ್ನು ಸ್ಥಾಪಿಸುತ್ತಿದೆ ಮತ್ತು ಇದು ಏಷ್ಯಾದಲ್ಲಿಯೇ ಅತಿ ದೊಡ್ಡದಾಗಿದೆ.

ಕಂಪನಿಯು ತನ್ನ ಉತ್ಪನ್ನಗಳನ್ನು ' ಬನ್ಸಾಲ್ ' ಹೆಸರಿನಲ್ಲಿ ಮಾರಾಟ ಮಾಡುತ್ತದೆ, ಇದು ಮೂರು ವಿಶಾಲ ವಿಭಾಗಗಳಲ್ಲಿ ಕಾರ್ಯನಿರ್ವಹಿಸುತ್ತದೆ, ಅಂದರೆ, ಹೆಚ್ಚಿನ ಕಾರ್ಬನ್ ಸ್ಟೀಲ್ ವೈರ್, ಮೈಲ್ಡ್ ಸ್ಟೀಲ್ ವೈರ್ ಮತ್ತು ಸ್ಟೇನ್‌ಲೆಸ್ ಸ್ಟೀಲ್ ವೈರ್ ಮತ್ತು ನಾವು ದಾದ್ರಿಯಲ್ಲಿ ಮುಂಬರುವ ಸ್ಥಾವರದ ಮೂಲಕ ವಿಶೇಷ ತಂತಿಗಳ ಹೊಸ ವಿಭಾಗವನ್ನು ಸೇರಿಸಿ ಉತ್ಪಾದನೆಯಲ್ಲಿ ತೊಡಗುತ್ತೇವೆ.

ಮುಂಬರುವ ಹಣಕಾಸು ವರ್ಷಗಳಲ್ಲಿ ತನ್ನ ಮಾರುಕಟ್ಟೆ ಉಪಸ್ಥಿತಿಯನ್ನು ಬೆಳೆಸಲು ಮತ್ತು ವಿಸ್ತರಿಸಲು ಈ ನೂತನ ಸೌಲಭ್ಯವು ಕಂಪೆನಿಗೆ ಸಹಕಾರಿ ಆಗಲಿದೆ.

ಬನ್ಸಾಲ್ ವೈರ್ ಗಮನಾರ್ಹವಾದ ಜಾಗತಿಕ ಹೆಜ್ಜೆಗುರುತನ್ನು ಹೊಂದಿದೆ ಮತ್ತು ಅದರ ಉತ್ಪನ್ನಗಳನ್ನು 50 ಕ್ಕೂ ಹೆಚ್ಚು ದೇಶಗಳಿಗೆ ರಫ್ತು ಮಾಡುತ್ತಿದೆ. ಬಾಂಗ್ಲಾದೇಶ, ಬ್ರೆಜಿಲ್, ಫ್ರಾನ್ಸ್, ಜರ್ಮನಿ, ಇಸ್ರೇಲ್, ಇಟಲಿ, ನೆದರ್ಲ್ಯಾಂಡ್, ದಕ್ಷಿಣ ಕೊರಿಯಾ, ದಕ್ಷಿಣ ಆಫ್ರಿಕಾ, ಶ್ರೀಲಂಕಾ, ಟರ್ಕಿ, ಯುನೈಟೆಡ್ ಕಿಂಗ್‌ಡಮ್, ಯುನೈಟೆಡ್ ಸ್ಟೇಟ್ಸ್ ಆಫ್ ಅಮೇರಿಕಾ ಮತ್ತು ವಿಯೆಟ್ನಾಂನಂತಹ ದೇಶಗಳನ್ನು ಒಳಗೊಂಡಿರುವ 14 ಜಾಗತಿಕ ಪ್ರತಿನಿಧಿಗಳೊಂದಿಗೆ ರಫ್ತು ಮಾಡಲಾಗುತ್ತಿದೆ.

ಖಃಖ ಕ್ಯಾಪಿಟಲ್ ಮಾರ್ಕೆಟ್ಸ್ ಲಿಮಿಟೆಡ್ ಮತ್ತು DAM ಕ್ಯಾಪಿಟಲ್ ಅಡ್ವೈಸರ್ಸ್ ಲಿಮಿಟೆಡ್ ಈ ಸಂಚಿಕೆಗೆ ಪುಸ್ತಕ ರನ್ನಿಂಗ್ ಲೀಡ್ ಮ್ಯಾನೇಜರ್‌ಗಳಾಗಿವೆ.

## ನೀರಾವರಿ ಪಂಪ್‌ಸೆಟ್ ಸ್ಥಾವರಗಳಿಗೆ ಆಧಾರ್ ಜೋಡಣೆ ಮಾಡಲು ಮೆಸ್ಕಾಂ ಸೂಚನೆ

ಶಿವಮೊಗ್ಗ: ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣಾ ಆಯೋಗದ ನಿರ್ದೇಶನಗಳ ಪ್ರಕಾರ 10 ಹೆಚ್.ಪಿ ಮತ್ತು ಅದಕ್ಕಿಂತ ಕಡಿಮೆ ವಿದ್ಯುತ್ ಹೊಂದಿರುವ ನೀರಾವರಿ ಪಂಪ್ಸೆಟ್ ಗ್ರಾಹಕರು ತಮ್ಮ ಸ್ಥಾವರ ಸಂಖ್ಯೆಗೆ ಆಧಾರ್ ಜೋಡಣೆ ಮಾಡಬೇಕಾಗಿರುತ್ತದೆ,

ಆದುದರಿಂದ ಮೆಸ್ಕಾಂ ವ್ಯಾಪಿಯಲ್ಲಿ ಬರುವ ಮಂಗಳೂರು, ಉಡುಪಿ, ಶಿವಮೊಗ್ಗ ಮತ್ತು ಚಿಕ್ಕಮಗಳೂರು ಜಿಲ್ಲಾ ವ್ಯಾಪ್ತಿಯ 10 ಹೆಚ್.ಪಿ ಮತ್ತು ಅದಕ್ಕಿಂತ ಕಡಿಮೆ ವಿದ್ಯುತ್ ಹೊಂದಿರುವ ನೀರಾವರಿ ಪಂಪ್ಸೆಟ್ ಗ್ರಾಹಕರು ಸಮೀಪದ ಮೆಸ್ಕಾಂ ಉಪವಿಭಾಗ ಕಛೇರಿಯನ್ನು ಸಂಪರ್ಕಿಸಿ ತಮ್ಮ ಸ್ಥಾವರಗಳಿಗೆ ಆಧಾರ್ ಜೋಡಣೆ ಮಾಡಬೇಕಾಗಿ ಮೆಸ್ಕಾಂ ಪ್ರಕಟಣೆ ತಿಳಿಸಿದೆ.

## ಯುಪಿಎಸ್‌ಸಿಯಲ್ಲಿ ಸಾಧನೆ: ಅಕ್ಷಯಗೆ ಸನ್ಮಾನ



ಬೆಳಗಾವಿ: ಯುಪಿಎಸ್‌ಸಿ ಪರೀಕ್ಷೆಯಲ್ಲಿ ಸಾಧನೆಗೈದ ಬೆಳಗಾವಿ ಜಿಲ್ಲೆಯ ಮೂಡಲಗಿ ತಾಲೂಕಿನ ಹೊಸಯರಗುದ್ರಿ ಗ್ರಾಮದ ಅಕ್ಷಯ ಗಿರೀಶ ನಾಡಗೌಡ ಅವರಿಗೆ ಜಿಲ್ಲಾ ಉಸ್ತುವಾರಿ ಹಾಗೂ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ಗೋಕಾಕನ ಹಿಲ್ ಗಾರ್ಡನ್ ನಲ್ಲಿ ಸನ್ಮಾನಿಸಿದರು.

ಈ ವೇಳೆ ಸಚಿವ ಸತೀಶ್ ಜಾರಕಿಹೊಳಿ ಮಾತನಾಡಿ, ಸಾಧನೆಗೆ ಅಸಾಧ್ಯವಾದುದು ಯಾವುದೂ ಇಲ್ಲ. ಕಠಿಣ ಪ್ರರಿಶ್ರಮ ಮತ್ತು ಶ್ರದ್ಧೆ ಇದ್ದರೆ ಸಾಕು ಯಾವ ಮಾಧ್ಯಮವಾದರೇನು ಕನಸನ್ನು ನನಸು ಮಾಡಬಹುದು ಎಂಬುದಕ್ಕೆ ಮೂಡಲಗಿ ತಾಲೂಕಿನ ಹೊಸಯರಗುದ್ರಿ ಗ್ರಾಮದ ಅಕ್ಷಯ ಗಿರೀಶ ನಾಡಗೌಡ ಅವರು ಸಾಕ್ಷಿಯಾಗಿದ್ದಾರೆ ಎಂದರು.

ಮೂಡಲಗಿ ತಾಲೂಕಿನ ಹೊಸಯರಗುದ್ರಿ ಗ್ರಾಮದ ಅಕ್ಷಯ ಗಿರೀಶ ನಾಡಗೌಡ ಅವರು ಯುಪಿಎಸ್‌ಸಿ ಪರೀಕ್ಷೆಯಲ್ಲಿ 186 ಶ್ರೆಯಾಂಕ ಪಡೆದು ಬೆಳಗಾವಿ ಜಿಲ್ಲೆಗೆ ಕೀರ್ತಿ ತಂದಿದಾರೆ. ಅಲ್ಲದ ಜಿಯೋಸಿಂಟಿಸ್ಟ್ ಅಥವಾ ಗಣಿಗಾರಿಕೆ ಅಧಿಕಾರಿ ಗುಂಪು ಂ ಗಣಿಗಳಲ್ಲಿ ಕರ್ನಾಟಕ ದಿಂದ ಒಬ್ಬರೆ ಆಂಯ್ಕೆಯಾಗುವದರೊಂದಿಗೆ ಕರುನಾಡಿಗೆ ಹೆಮ್ಮೆ ತಂದಿದ್ದಾರೆ. ಇವರ ಮುಂದಿನ ಜೀವನ ಒಳ್ಳೆಯದಾಗಲಿ ಎಂದು ಹಾರೈಹಿಸಿದರು.

ಈ ವೇಳೆ ಹೊಸಯರಗುದ್ರಿ ಗ್ರಾಮದ ಹಿರಿಯ ಮುಖಂಡರು ಸೇರಿದಂತೆ ಇತರರು ಇದ್ದರು.

## ಸತೀಶ್ ಶುಗರ್ಸ್ ಅವಾರ್ಡ್ಸ್ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಣೆ

ಗೋಕಾಕ: ನಗರದ ವಾಲ್ಮೀಕಿ ಕ್ರೀಡಾಂಗಣದಲ್ಲಿ 20 ನೇ ಸತೀಶ ಶುರ್ಗಸ್ಸ್ ಅವಾರ್ಡ್ಸ್ ಸಾಂಸ್ಕೃತಿಕ ಕಾರ್ಯಕ್ರಮದ ಅಂತಿಮ ದಿನದ ಕಾಲೇಜು ವಿಭಾಗದ ಗಾಯನ ಸ್ವರ್ಧೆಯಲ್ಲಿ ಗೋಕಾಕನ ಎಸ್.ಎಸ್.ಎ ಪಿಯು ಕಾಲೇಜಿನ ಸುದರ್ಶನ್ ರೆಬ್ಬನ್ನವರ ಪ್ರಥಮ, ಜ್ಞಾನ ದೀಪ ಕಾಲೇಜಿನ ಶಿವರಾಯಿ ಕಳಶ್ಯಾಳಗೋಳ ದ್ವಿತೀಯ, ಮೂಡಲಗಿಯ ಎಂ.ಇ.ಎಸ್.ಡಿಗ್ರಿ ಕಾಲೇಜಿನ ಐಶ್ವರ್ಯ ತಳವಾರ ತೃತೀಯ ಸ್ಥಾನ ಪಡೆದಿದ್ದಾರೆ.

ಪ್ರಥಮಸ್ಥಾನ ಪಡೆದ ವಿದ್ಯಾರ್ಥಿಗೆ 10 ಸಾವಿರ, ದ್ವಿತೀಯ 7 ಸಾವಿರ, ತೃತೀಯ 5 ಸಾವಿರ ರೂಗಳ ನಗದು ಹಾಗೂ ಆಕರ್ಷಕ ಟ್ರೋಪಿ ನೀಡಿ ಗೌರವಿಸಲಾಯಿತು.

ಪ್ರೌಢಶಾಲಾ ವಿಭಾಗದ ಗಾಯನ ಸ್ವರ್ಧೆಯಲ್ಲಿ ಕಲ್ಲೋಳಿಯ ಎಸ್.ಆರ್.ಇ ಶಾಲೆಯ ಸುಪ್ರೀಯಾ ಮಠಪತಿ ಪ್ರಥಮ, ಖನಗಾವದ ಆರ್.ಎಂ.ಎಸ್.ಎ ಶಾಲೆಯ ಪೂಜಾ ಮಿಲ್ಕೆ ದ್ವಿತೀಯ, ಗೋಕಾಕನ ಫಾಲ್ಸ್ ನ ಪೋಬ್ಸ ಅಕ್ಯಾಡಮಿ



ಸ್ಕೂಲ್ ನ ಸುನೀಧಿ ಮುತಾಲಿಕದೇಸಾಯಿ ತೃತೀಯ ಸ್ಥಾನ ಪಡೆದಿದ್ದಾರೆ.

ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗೆ 15 ಸಾವಿರ, ದ್ವಿತೀಯ 13 ಸಾವಿರ, ತೃತೀಯ 10 ಸಾವಿರ ರೂಗಳ ನಗದು ಹಾಗೂ ಆಕರ್ಷಕ ಟ್ರೋಪಿ ನೀಡಿ ಗೌರವಿಸಲಾಯಿತು.

ಪ್ರಾಥಮಿಕ ವಿಭಾಗದ ಸಮೂಹ ನೃತ್ಯ ಸ್ವರ್ಧೆಯಲ್ಲಿ ಗೋಕಾಕನ ಚನ್ನಬಸವೇಶ್ವರ ವಿದ್ಯಾಪೀಠ ಶಾಲಾ ತಂಡ ಪ್ರಥಮ, ನಾಗನೂರಿನ ಎಂ.ಡಿ.ಆರ್.ಎಸ್.ತಂಡ ದ್ವಿತೀಯ, ದೂಪದಾಳನ ಶ್ರೀ ಮಹಾವೀರ ಖೇಮಲಾಪೂರೆ ಶಾಲಾ ತಂಡ ತೃತೀಯ ಸ್ಥಾನ ಪಡೆದಿದ್ದಾರೆ.

ಪ್ರೌಡಶಾಲಾ ವಿಭಾಗದ ಸಮೂಹ ನೃತ್ಯ ಸ್ವರ್ಧೆಯಲ್ಲಿ ಕಲ್ಲೋಳಿಯ ಪಿ.ಜೆ.ಎನ್.ಶಾಲೆಯ ಶಾಲಾ ತಂಡ ಪ್ರಥಮ, ಕಲ್ಲೋಳಿಯ ಮೊರಾರ್ಜಿ ಶಾಲಾ ತಂಡ ದ್ವಿತೀಯ , ಗೋಕಾಕನ ಶೇಪರ್ಡ ಮಿಶನ್ ಆಂಗ್ಲ ಮಾಧ್ಯಮ ಶಾಲಾ ತಂಡ ತೃತೀಯ ಸ್ಥಾನ ಪಡೆದಿದ್ದೆ.

ಪ್ರಥಮ ಸ್ಥಾನ ಪಡೆದ ತಂಡಕ್ಕೆ 50 ಸಾವಿರ, ದ್ವಿತೀಯ 30 ಸಾವಿರ ಹಾಗೂ ತೃತೀಯ 20 ಸಾವಿರ ನಗದು ಹಾಗೂ ಆಕರ್ಷಕ ಟ್ರೋಫಿ ನೀಡಿ ಗಣ್ಯರು ಗೌರವಿಸದರು.

ಇದೇ ಸಂಧರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಗೈದ ಸಾಧಕರನ್ನು ಸತ್ಕರಿಸಿ ಗೌರವಿಸಲಾಯಿತು. ಹಾಗೂ ಎಸ್.ಎಸ್.ಎಲ್.ಸಿ. ಮತ್ತು ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ತಲಾ 15 ಸಾವಿರ ರೂ ನಗದು ಹಾಗೂ ಸ್ಮರಣಿಕೆ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಸತೀಶ ಶುರ್ಗಸ್ಸ್ ಲಿಮಿಟೆಡ್ ನ ವ್ಯವಸ್ಥಾಪಕ ನಿರ್ದೇಶಕಿ ಪ್ರಿಯಾಂಕಾ ಜಾರಕಿಹೊಳಿ, ಯುವ ಮುಖಂಡರುಗಳಾದ ಡಿಎಚ್‌ಓ ಡಾ.ಮಹೇಶ್ ಕೋಣಿ, ಸಿಪಿಐ ಶ್ರೀಶೈಲ ಬ್ಯಾಕೂಡ, ಬಸವರಾಜ ಕುರಿಹೂಲಿ, ಅನೇಕರು ಉಪಸ್ಥಿತರಿದ್ದರು.

## ಸಿಬ್ಬಂದಿಗಳ ಪರಿಶ್ರಮದಿಂದ ಪಿರಜಾದೆ ಆಟೋಮೊಬೈಲ್ಸ್ ಎತ್ತರಕ್ಕೆ ಬೆಳೆದಿದೆ: ಎ.ಎಸ್. ಪೀರಜಾದೆ

ಪೀರಜಾದೆ ಆಟೋಮೊಬೈಲ್ಸ್ ಐದನೇಯ ವಾರ್ಷಿಕೋತ್ಸವ ಪ್ರಶಸ್ತಿ ಪ್ರದಾನ ಕಾರ್ಯಕ್ರಮ


ಬೆಳಗಾವಿ: ಸಿಬ್ಬಂದಿಗಳ ಸತತ ಪರಿಶ್ರಮ, ಗ್ರಾಹಕರಿಗೆ ನೀಡಿರುವ ಗುಣಮಟ್ಟ ಸೇವೆಯಿಂದ ಪೀರಜಾದೆ ಆಟೋಮೊಬೈಲ್ಸ್ ಇಷ್ಟೊಂದು ಎತ್ತರಕ್ಕೆ ಬೆಳೆಯಲು ಸಾಧ್ಯವಾಗಿದೆ ಎಂದು ಸಂಸ್ಥಾಪಕ ಎ.ಎಸ್. ಪೀರಜಾದೆ ಅವರು ಹೇಳಿದರು.

ನಗರದ ಖಾಸಗಿ ಹೋಟೆಲ್ ನಲ್ಲಿ ಆಯೋಜಿಸಲಾದ ಪೀರಜಾದೆ ಆಟೋಮೊಬೈಲ್ಸ್ ಐದನೇಯ ವಾರ್ಷಿಕೋತ್ಸವದಲ್ಲಿ ಸಿಬ್ಬಂದಿಗಳ ಅತ್ಯುತ್ತಮ ಪ್ರಶಸ್ತಿ ಪ್ರದಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಜಾಜ್ ಆಟೋ ಲಿಮಿಟೆಡ್ ನವರು ನಮಗೆ ಬಹಳಷ್ಟು ಶಕ್ತಿ ತುಂಬಿದ್ದಾರೆ. ಅವರ ಸಹಾಯ–ಸಹಕಾರದಿಂದ ರಾಜ್ಯದ ಮೂರು ಜಿಲ್ಲೆಯಲ್ಲಿ ಪೀರಜಾದೆ ಆಟೋಮೊಬೈಲ್ಸ್ ಕಾರ್ಯನಿರ್ವಸುತ್ತಿವೆ. ಬ್ಯಾಂಕಗಳ ಜೊತೆಗಿರುವ ಉತ್ತಮ ಬಾಂಧವ್ಯದಿಂದ ನಮ್ಮ ವ್ಯವಹಾರ ಸರಾಗವಾಗಿ ನಡೆಯುತ್ತಿವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಗ್ರಾಹಕರಿಗೆ ವಾಹನಗಳನ್ನು ಮಾರಾಟ ಮಾಡಿದರೆ ಸಾಲದು ಅವರ ಕುಂದುಕೊರತೆಗಳನ್ನು ತ್ವರಿತವಾಗಿ, ಸೌಜನ್ಯದಿಂದ ಪರಿಹರಿಸಬೇಕಿದೆ. ಅವರ ಸಮಸ್ಯೆಗಳನ್ನು ತೃಪ್ತಿಕರವಾಗಿ ಸ್ವೀಕರಿಸಿ ತಕ್ಷಣವೇ ಪರಿಹರಿಸುವ ಕಾರ್ಯವನ್ನು ಮಾಡಿದಾಗ ಮಾತ್ರ ಉತ್ತಮ ಕಂಪನಿ ಕಟ್ಟಲು ಸಾಧ್ಯ ಎಂದು ಹೇಳಿದರು.

ಬಜಾಜ್ ಆಟೋ ಲಿಮಿಟೆಡ್ ಸೇಲ್ಸ್ ರೀಜನಲ್ ಮ್ಯಾನೇಜರ್ ರಾಘವೇಂದ್ರ ಎ. ಅವರು ಮಾತನಾಡಿ, ಗ್ರಾಹಕರ ವಿಶ್ವಾಸ ಗಳಿಸಿ ಬಜಾಜ್ ಆಟೋ ಲಿಮಿಟೆಡ್ ಭಾರತದಲ್ಲಿ ನಂ 1 ಸ್ಥಾನದಲ್ಲಿದೆ.



ಮತ್ತು 72 ದೇಶಗಳಲ್ಲಿ ವಿಸ್ತಾರಹೊಂದಿ, ಸೇವೆ ಸಲ್ಲಿಸುತ್ತಿದೆ. ಗ್ರಾಹಕರ ಜತೆ ಉತ್ತಮ ಬಾಂಧವ್ಯ ಇಟ್ಟುಕೊಂಡಾಗ ಮಾತ್ರ ಕಂಪನಿಗಳು ಬೆಳೆಯಲು ಸಾದ್ಯ. ಅದಕ್ಕೆ ಸಿಬ್ಬಂದಿ ಶ್ರಮವೂ ಬೇಕು ಎಂದು ಹೇಳಿದರು.

ಕರ್ನಾಟಕದಲ್ಲಿ ಬಜಾಜ್ ಆಟೋ ಲಿಮಿಟೆಡ್ ಸುಮಾರು ಶೇ 82% ಮಾರುಕಟ್ಟೆ ಪಾಲು ಪಡೆದಿದೆ. ಇದಕ್ಕೆಲ್ಲ ಕಾರಣ ಅತ್ಯುತ್ತಮ ತಂತ್ರಜ್ಞಾನ, ಗ್ರಾಹಕರ ಸಂತೃಪ್ತಿ ಹಾಗೂ ಬ್ಯಾಂಕ್ ಮತ್ತು ಫೈನಾನ್ಸ್ ಗಳ ಸಹಕಾರ. ರಾಜ್ಯದ ಬಜಾಬ್ ಡಿಲರ್‌ಗಳಾದ ಪಿರಜಾದೆ ಆಟೋಮೋಬೈಲ್ಸ್ ಅವರು ಕಂಪನಿ ಜತೆ ಉತ್ತಮ ಬಾಂಧವ್ಯ ಹೊಂದಿದ್ದಾರೆ. ಹೀಗಾಗಿ 2023 ರಲ್ಲಿ 1600 ಆಟೋ ಗಳನ್ನು ಸೆಲ್ ಮಾಡಿ ಕಂಪನಿಯ ಬಲವರ್ಧನೆಗೆ ಸಹಕಾರ ನೀಡಿದ್ದಾರೆ.

ಪೀರಜಾದೆ ಅವರು, ಕರ್ನಾಟಕದಲ್ಲಿ ಅತ್ಯುತ್ತಮ ಸರ್ವಿಸ್ ಡಿಲರ್ ಎಂಬ ಖ್ಯಾತಿ ಪಡೆದಿದ್ದಾರೆ. ಅವರ ಶ್ರಮದಿಂದ ಪಿರಜಾದೆ ಅಟೋ ಮೊಬೈಲ್ ಐದು ವಾರ್ಷಿಕೊತ್ಸವ ಆಚರಿಸಿಕೊಳ್ಳುತ್ತಿದೆ, ಅವರು ಇನ್ನು ಎತ್ತರಕ್ಕೆ ಬೆಳೆಯಬೇಕು ಎಂದು ಹಾರೈಸಿದರು. ಪಿರಜಾದೆ ಅಟೋ ಮೊಬೈಲ್ ಸೇಲ್ಸ್ ಸರ್ವಿಸ್ ಪರಿಗಣಿಸಿ ಬಜಾಜ್ ಕಂಪನಿಯರು ನಾಲ್ಕು ಚಕ್ರ ವಾಹನ ಸೇಲ್ಸ್ ಮಾಡಲು ಅನುಮತಿ ನೀಡಿದ್ದಾರೆ ಎಂದು ತಿಳಿಸಿದರು.

ಈ ವೇಳೆ ಬೆಳಗಾವಿ, ಬಾಗಲಕೋಟ, ವಿಜಯಪುರದಲ್ಲಿ ಕಾರ್ಯನಿರ್ವಸುತ್ತಿರುವ ಪೀರಜಾದೆ ಬಜಾಜ್ ಅಟೋ ಮೊಬೈಲ್ಸ್ ಸಿಬ್ಬಂದಿಗಳಿಗೆ ಅತ್ಯುತ್ತಮ ಸೇಲ್ಸ್ ಮ್ಯಾನೇಜರ್, ಸೇಲ್ಸ್ ಸರ್ವಿಸ್, ಹೀಗೆ ಹಲವಾರು ಪ್ರಶಸ್ತಿಗಳನ್ನು ಸಿಬ್ಬಂದಿಗಳಿಗೆ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಮುಖಂಡ ಮುಖ್ತಾರ್ ಪಠಾಣ್, ಸರ್ವಿಸ್ ಮಾನ್ಯೇಜರ್ ಆನಂತಪದ್ಮನಾಭ, ವಿಶ್ವನಾಥ ಹಾನಗಲ್, ಅನಿತಾ , ಸಿದ್ಧಲಿಂಗೇಶ್ವರ, ಪುಣೆ ಪೀಪಲ್ಸ್ ಬ್ಯಾಂಕ್ ಮ್ಯಾನೇಜರ ಜಗದೀಶ್, ಶಹಬಾಜ್, ಇಬ್ರಾನ್ ಪೀರಜಾದೆ , ಇರಫಾನ್ ಪೀರಜಾದೆ , ಎಜಾದ್ ಪೀರಜಾದೆ, ಅಫ್ತಾಬ್ ಐರಾಣಿ ಹಾಗೂ ಇತರರು ಇದ್ದರು.

## ಕೃಷಿ ನವೋದ್ಯಮ ಕಾರ್ಯಕ್ರಮ: ಕೃಷಿಯಲ್ಲಿ ಆಸಕ್ತ ಹಾಗೂ ಪ್ರಗತಿಪರ ರೈತರಿಗೆ ಸುವರ್ಣ ಅವಕಾಶ

ಬೆಳಗಾವಿ: 2023–24ನೇ ಸಾಲಿನಲ್ಲಿ ಕೃಷಿ ಕ್ಷೇತ್ರದಲ್ಲಿ ಉದ್ಯಮಶೀಲತೆಯನ್ನು ಹೆಚ್ಚಿಸಲು ಹಾಗೂ ಗ್ರಾಮೀಣ ಭಾಗದ ಯುವಕರಿಗೆ ಉದ್ಯೋಗ ಸೃಜನೆಗಾಗಿ ಕೃಷಿಯಲ್ಲಿನ ನೂತನ ತಾಂತ್ರಿಕತೆಗಳು, ನವೀನ ಪರಿಕಲ್ಪನೆಗಳ ವಾಣಿಜ್ಯೀಕರಣವನ್ನು ಉತ್ತೇಜಿಸುವ ಗುರಿಯೊಂದಿಗೆ ಕೃಷಿ ನವೋದ್ಯಮ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವುದು.

ಆದರಿಂದ ಕೃಷಿ ಪದವಿಧರರು, ವಿಧ್ಯಾವಂತ ಯುವಕರು, ಆಸಕ್ತ ಪ್ರಗತಿಪರ ರೈತರು ಕೃಷಿ ವಲಯದಲ್ಲಿ ನವೋದ್ಯಮ ಆರಂಭಿಸಲು ಸಹಾಯ ನೀಡಿ ಗ್ರಾಮೀಣ ಭಾಗದಲ್ಲಿ ಉದ್ಯೋಗ ಸೃಜನೆ ಮಾಡುವುದು ಕಾರ್ಯಕ್ರಮದ ಉದ್ದೇಶವಾಗಿದೆ.

ಯೋಜನೆಯ ಘಟಕಗಳು:

ಕೃಷಿ ಕ್ಷೇತ್ರದಲ್ಲಿ ನೂತನ ಪರಿಕಲ್ಪನೆಯೊಂದಿಗೆ ಆರಂಭಿಸುವ ಹೊಸ ಕೃಷಿ ನವೋದ್ಯಮಿಗಳಿಗೆ ಅನುಮೋದಿತ ಯೋಜನಾ ವರದಿಯ ಶೇ.50% ರಷ್ಟು ಸಹಾಯಧನವನ್ನು ಬ್ಯಾಂಕ್ ಸಾಲದ ಮುಖಾಂತರ ನೀಡಲಾಗುವುದು.

ಕೃಷಿ ವಲಯದಲ್ಲಿ ಈಗಾಗಲೇ ಸ್ಥಾಪಿಸಲಾದ ನವೋದ್ಯಮಗಳ ವಿಸ್ತರಣೆಗಾಗಿ ಹಾಗೂ ಉನ್ನತಿಕರಣಕ್ಕಾಗಿ ಯೋಜನಾ ವರದಿ ಶೇ. 50 ರಷ್ಟು ಸಹಾಯಧನವನ್ನು ಕೃಷಿ ವಲಯದ ನವೋದಮಿಗಳಿಗೆ ಬ್ಯಾಂಕ್ ಸಾಲದ ಮುಖಾಂತರ ನೀಡಲಾಗುವುದು.

ಆಯ್ಕೆಯಾದ ನವೋದ್ಯಮಗಳ ಸಾಮರ್ಥ್ಯಾಭಿವೃದ್ದಿಗೆ ಕೃಷಿ ವಿಶ್ವ ವಿದ್ಯಾಲಯ ICAR, CFTRI, CSIRC-CAMP ಹಾಗೂ ಇತರೆ ಸಂಶೊಧನಾ ಸಂಸ್ಥೆಗಳಾದ ವಿದ್ಯುನ್ಮಾನ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯಡಿ ಸ್ಥಾಪಿತವಾಗಿರುವ ಕೃಷಿ ನಾವೀನ್ಯತೆಗಾಗಿ ಶ್ರೇಷ್ಠತೆಯ ಕೇಂದ್ರಗಳ ಮೂಲಕ ತರಬೇತಿಗಳನ್ನು ನೀಡಲಾಗುವುದು.

ಆಸಕ್ತಿಯುಳ್ಳ ಫಲಾನುಭವಿಗಳು ಜ.25ರ ಒಳಗಾಗಿ ಅರ್ಜಿಯನ್ನು ತಮ್ಮ ತಾಲೂಕಿನ ಸಮೀಪದ ರೈತ ಸಂಪರ್ಕ ಕೇಂದ್ರ, ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಛೇರಿ, ವಿಭಾಗಿಯ ಉಪ ಕೃಷಿ ನಿರ್ದೇಶಕರು ಕಛೇರಿ ಹಾಗೂ ಜಂಟಿ ಕೃಷಿ ನಿರ್ದೇಶಕರ ಕಛೇರಿ, ಬೆಳಗಾವಿ ಇವರಿಗೆ ಸಲ್ಲಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ಹೈಟೆಕ್ ಹಾರ್ವೆಸ್ಟರ್ ಹಬ್‌ಗಳಿಗೆ ಕೃಷಿ ಇಲಾಖೆಯಿಂದ ಅರ್ಜಿ ಆಹ್ವಾನ

ಬೆಳಗಾವಿ: 2023–24 ನೇ ಸಾಲಿನಲ್ಲಿ ಹೈಟೆಕ್ ಹಾರ್ವೆಸ್ಟರ್ ಹಬ್‌ಗಳ ಅನುಷ್ಠಾನ ಮಾಡಲು ಚಾಲ್ತಿಯಲ್ಲಿರು ನೋಂದಾಯಿತ ಸಂಘ–ಸಂಸ್ಥೆಗಳು(ಈಕಔ ಗಳನ್ನೊಳಗೊಂಡಂತೆ), ಯಂತ್ರಧಾರೆ ಕೇಂದ್ರಗಳು, ವೈಯಕ್ತಿಕ ಫಲಾನುಭವಿಗಳಿಗೆ ಸಹಾಯಧನ ನೀಡುವ ಕಾರಣ ಸಾಮಾನ್ಯ ವರ್ಗದ ರೈತರಿಗೆ ಗರಿಷ್ಠ ಶೇ.50 ರಂತೆ ಪ.ಜಾ/ಪ.ಪಂ. ವರ್ಗದ ರೈತರಿಗೆ ಗರಿಷ್ಠ ಶೇ.70 ರಂತೆ ಹಾಗೂ ಸಂಘ–ಸಂಸ್ಥೆಗಳಿಗೆ ಗರಿಷ್ಠ ಶೇ.70 ರಂತೆ ಸಹಾಯಧನ ನೀಡಲಾಗುವುದು

ಬೆಳಗಾವಿ ಜಿಲ್ಲೆಗೆ ಎರಡು ಅಅಟಛಅ ಹಾರ್ವೆಸ್ಟರ್ ಹಬ್, ಒಂದು ಕಂಬೈನ್ಡ್ ಹಾರ್ವೆಸ್ಟರ್ ಹಬ್ ಹಾಗೂ ಏಳು ಶುಗರ್‌ಕೇನ್ ಹಾರ್ವೆಸ್ಟರ್ ಹಬ್ ಕೇಂದ್ರ ಕಛೇರಿಯಿಂದ ಕಾರ್ಯಕ್ರಮವಿದ್ದು, ಜಿಲ್ಲಾ ಮಟ್ಟದ ಉಪಕರಣ ಸಮಿತಿ ಸಭೆಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಳಗಾವಿ ಅವರ ಅಧ್ಯಕ್ಷತೆಯಲ್ಲಿ ನಿಯಮಾನುಸಾರ ಹೈಟೆಕ್ ಹಾರ್ವೆಸ್ಟರ್ ಹಬ್‌ಗಳನ್ನು ನಿರ್ವಹಿಸಲು ಸಂಸ್ಥೆ/ ವೈಯಕ್ತಿಕ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುವುದು.

ಅರ್ಜಿದಾರರು ಇಚ್ಛಿಸುವ ಹಬ್‌ಗೆ ಅರ್ಜಿ ಜೊತೆ, ನೊಂದಾಯಿಸಿದ ಸಂಸ್ಥೆ ಪ್ರಮಾಣ ಪತ್ರ, ಪಹಣಿ, ಜಾತಿಪ್ರಮಾಣ ಪತ್ರ, ಗುರುತಿನಪತ್ರ, ಬ್ಯಾಂಕ್‌ಖಾತೆ ಸಂಖ್ಯೆ, ರೂ.20/–ಗಳ ಛಾಪಾ ಕಾಗದದ ಮೇಲೆ ಹಬ್‌ನ್ನು ಪರಭಾರೆ ಮಾಡುವುದಿಲ್ಲವೆಂದು ಮುಚ್ಚಳಿಕೆ ಪತ್ರ, 2 ವರ್ಷಗಳ ಲೆಕ್ಕ ಪರಿಶೋಧನಾ ಪತ್ರ, ಸಕ್ಕರೆ ಕಾರ್ಖಾನೆಗಳಿಂದ ಕಬ್ಬು ಕಟಾವಿಗೆ ಮಾಡಿಕೊಂಡ ಲಿಖಿತ ಒಪ್ಪಂದ ಪ್ರಮಾಣ ಪತ್ರ ಹಾಗೂ ಸಹಾಯಧನವು ಅಡಿಜಜುಣ ಖಟಿಇಜಜ ಃಚಿಥಿಇ ಜಟಿಜಜಜ ಣಭುಜಥಿ ಆಗಿರುವುದರಿಂದ ಸಂಬಂಧಿಸಿದ ಬ್ಯಾಂಕ್‌ನಿಂದ "ತಾತ್ವಿಕ ಸಾಲ ಮಂಜೂರಾತಿ ಪತ್ರ" (In Principle Loan Sanction Letter) ವನ್ನು ಸಂಭಂದಿಸಿದ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಛೇರಿಯಲ್ಲಿ ಸಲ್ಲಿಸುವುದು.

ಕೃಷಿ ಯಂತ್ರಧಾರೆ ಕೇಂದ್ರಗಳ, ಸಹಕಾರಿ ಸಂಘಗಳ ನಿಬಂಧನೆಯಂತೆ, ಕಂಪನಿ ಕಾಯ್ದೆಯಡಿ ನೋಂದಾಯಿಸಿದ ಸಂಘ–ಸಂಸ್ಥೆಗಳು ಮಾತ್ರ ಅರ್ಹತೆಯನ್ನು ಹೊಂದಿರುತ್ತವೆ. ಫೆ. 05 ಒಳಗಾಗಿ ಅರ್ಜಿಯನ್ನು ಸಲ್ಲಿಸಬೇಕು ಬೆಳಗಾವಿಯ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಸಿದ್ದಾರೆ.

## "ಪರೀಕ್ಷಣ ಮತ್ತು ಮೌಲ್ಯ ನಿರ್ಧಾರಣೆ ಹಾಗೂ ಪ್ರಶ್ನಾಂಶ ಬರವಣಿಗೆ ಅಭ್ಯಾಸ" ಕುರಿತು ಕಾರ್ಯಾಗಾರ

ಬೆಳಗಾವಿ: ರಾಷ್ಟ್ರೀಯ ಪರೀಕ್ಷಣ ಸೇವೆ, ಮೈಸೂರಿನ ಭಾರತೀಯ ಭಾಷಾ ಸಂಸ್ಥಾನ ಹಾಗೂ ಸರಕಾರಿ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ ಇವರ ಸಹಯೋಗದಲ್ಲಿ ಶೈಕ್ಷಣಿಕ ಜಿಲ್ಲೆಯ ಉರ್ದು ಶಿಕ್ಷಕರುಗಳಿಗೆ ಉರ್ದು ಭಾಷೆಯಲ್ಲಿ "ಪರೀಕ್ಷಣ ಮತ್ತು ಮೌಲ್ಯ ನಿರ್ಧಾರಣೆ ಹಾಗೂ ಪ್ರಶ್ನಾಂಶ ಬರವಣಿಗೆ ಅಭ್ಯಾಸ" ಕುರಿತು ನಗರದ ಆಲೂರು ವೆಂಕಟರಾವ ಭಾಷಾ ಕೌಶಲ್ಯ ತರಬೇತಿ ಕೇಂದ್ರದಲ್ಲಿ ಜ.22 ರಿಂದ ಜ.24ರ ವರೆಗೆ ಮೂರು ದಿನಗಳ ಮುಖಾ–ಮುಖಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಗರದ ಸಿ ಟಿ ಇ ಪ್ರಾಚಾರ್ಯರು/ಸಹನಿರ್ದೇಶಕರಾದ ಎಮ್ ಎಮ್ ಸಿಂಧೂರ ಇವರು ವಹಿಸಿ ಭಾಷಾ ಶಿಕ್ಷಕರಿಗೆ ಅಗತ್ಯವಾದ ಈ ತರಬೇತಿಯ ಸದುಪಯೋಗ ಮಾಡಿಕೊಳ್ಳಲು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಸಂಸ್ಥೆಯ Dr. M.d. Saleem Ahmed Dr. Abdul Halim, Dr. Taiyab Ali Khan, ತರಬೇತಿ ಕಾರ್ಯಕ್ರಮದಲ್ಲಿ ಬೆಳಗಾವಿ ಶೈಕ್ಷಣಿಕ ಜಿಲ್ಲೆಯ ಐವತ್ತು ಜನ ಉರ್ದು ಶಿಕ್ಷಕರು ಹಾಗೂ ತರಬೇತಿ ನೋಡಲ್ ಅಧಿಕಾರಿ ಎಸ್ ಎಸ್ ಹಿರೇಮಠ ಉಪನ್ಯಾಸಕರು ಹಾಜರಿದ್ದರು. ಪ್ರವಾಚಕರಾದ ಬಿ ಎಸ್ ಮಾಯಾಚಾರಿ ನಿರೂಪಣೆ ಮಾಡಿದ್ದರು.

## ಇಂದು ಸಂತ ಮೀರಾ ಶಾಲೆ ವಾರ್ಷಿಕೋತ್ಸವ

ಬೆಳಗಾವಿ: ಬೆಳಗಾವಿಯ ಅನಗೋಳ ಸಂತ ಮೀರಾ ಆಂಗ್ಲ ಮಾಧ್ಯಮ ಶಾಲೆಯ ವಾರ್ಷಿಕೋತ್ಸವ ಜನವರಿ 23ರಂದು ನಡೆಯಲಿದೆ.

ಅಂದು ಸಂಜೆ 5.30ರಿಂದ ವಿವಿಧ ಕಾರ್ಯಕ್ರಮಗಳು ನಡೆಯಲಿವೆ. ಸಂಸದೆ ಮಂಗಳಾ ಅಂಗಡಿ, ಶಾಸಕರಾದ ಅಭಯ್ ಪಾಟೀಲ್, ವಿಠಲ್ ಹಲಗೇಕರ್, ಮಾಜಿ ಶಾಸಕರಾದ ಸಂಜಯ್ ಪಾಟೀಲ್, ಅನಿಲ್ ಬೆನಕೆ, ಬಿಇಓ ಲೀಲಾವತಿ ಹಿರೇಮಠ, ಗೋಪಾಲ್ ಜಿನಗೌಡ, ವಿನೋದ ದೊಡ್ಡಣ್ಣವರ್, ಪ್ರವೀಣ ಖೋಡಾ, ಅರವಿಂದ ಕುಲಕರ್ಣಿ, ಚೈತನ್ಯ ಕುಲಕರ್ಣಿ, ಸತೀಶ್ ನೇತಲಕರ್, ಚಂದ್ರಹಾಸ ಅಣ್ವೇಕರ್, ಸುಭಾಷ್ ಗುಳಶೆಟ್ಟಿ, ಕಾಶಿನಾಥ ಬಿರಾದಾರ, ಶ್ರೀಕಾಂತ ಕದಂ, ಚೇತನ್ ಮನೇರಿಕರ್, ಮಲ್ಲಿಕಾರ್ಜುನ ಹಳಿಜೋಳ, ದತ್ತಪ್ರಸಾದ ಗಿಜಾರೆ, ಶ್ರೀಶೈಲ ಕಾಂಬ್ಳೆ, ಅರವಿಂದ ದೇಶಪಾಂಡೆ ಮೊದಲಾದವರು ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದು ಚೇರಮನ್ ಪರಮೇಶ್ವರ ಹೆಗಡೆ ತಿಳಿಸಿದ್ದಾರೆ.

# ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣ ಭಾರತಕ್ಕೆ ಐತಿಹಾಸಿಕ ಕ್ಷಣ: ಶಾಸಕ ಬಾಲಚಂದ್ರ ಜಾರಕಿಹೊಳಿ

ಮೂಡಲಗಿ: ಅಯೋಧ್ಯೆ ರಾಮ ಮಂದಿರದಲ್ಲಿ ಬಾಲರಾಮನ ಪ್ರತಿಷ್ಠಾಪನೆಯಾಗಿದ್ದು,ಸತತ ಐನೂರು ವರ್ಷಗಳ ಹೋರಾಟದ ನಂತರ ಭವ್ಯವಾದ ರಾಮ ಮಂದಿರದಲ್ಲಿ ಶ್ರೀ ರಾಮನು ವಿರಾಜಮಾನನಾಗಿದ್ದಾನೆ ಎಂದು ಶಾಸಕ ಹಾಗೂ ಕೆಎಂಎಫ್ ನಿರ್ದೇಶಕ ಬಾಲಚಂದ್ರ ಜಾರಕಿಹೊಳಿ ಹೇಳಿದರು.

ಸೋಮವಾರದಂದು ಮೂಡಲಗಿ ತಾಲ್ಲೂಕಿನ ಕಲ್ಲೋಳಿ ಪಟ್ಟಣದ ರಾಮ ಮಂದಿರ ಮತ್ತು ಮಾರುತಿ ದೇವಸ್ಥಾನಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿದ ಅವರು, ಇಂದು ಭಾರತದ ಚರಿತ್ರೆಯಲ್ಲಿಯೇ ಈ ದಿನ ಸುವರ್ಣಾಕ್ಷರಗಳಿಂದ ಬರೆದಿಡುವ ಐತಿಹಾಸಿಕ ದಿನವಾಗಿದೆ ಎಂದು ಬಣ್ಣಿಸಿದರು.

ನಮ್ಮ ದೇಶದ ಇತಿಹಾಸದಲ್ಲಿ ಅತೀ ಮಹತ್ವದ ಭಕ್ತಿ ಭಾವದ ದಿವಸ. ಹೊಸ ಇತಿಹಾಸ ಸೃಷ್ಟಿಯಾಗಿರುವ ಐತಿಹಾಸಿಕ ಕ್ಷಣವಾಗಿದೆ. ಶ್ರೀ ರಾಮಚಂದ್ರನ ಪ್ರಾಣ ಪ್ರತಿಷ್ಠಾಪನೆ ದಿನ ಎಂದು ಅವರು ತಿಳಿಸಿದರು.



ಶ್ರದ್ಧಾ ಭಕ್ತಿಯಿಂದ ಅಯೋಧ್ಯೆಯಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಸಾಮರ್ಥ್ಯದಿಂದ ಶ್ರೀ ರಾಮನ ಪ್ರಾಣ ಪ್ರತಿಷ್ಠೆಯಾಗಿದೆ. ರಾಮ ಮಂದಿರ ನಿರ್ಮಾಣಕ್ಕಾಗಿ ಹಲವು ಮಹನೀಯರು ತ್ಯಾಗ, ಹೋರಾಟಗಳನ್ನು ಮಾಡಿದ್ದಾರೆ. ಕೋಟ್ಯಾಂತರ ರಾಮಭಕ್ತರ ಕನಸು ಇಂದು

ಅಯೋಧ್ಯೆಯಲ್ಲಿ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ನೆರವೇರುವ ಮೂಲಕ ಈಡೇರಿದೆ. ಪ್ರಧಾನಿ ನರೇಂದ್ರ ಮೋದಿಯವರ ಸಂಕಲ್ಪ ಇಂದು ಜಗತ್ತಿನಾದ್ಯಂತ ಜನರು ಕಣ್ತುಂಬಿ ಸಂಭ್ರಮಿಸುತ್ತಿದ್ದಾರೆ. ಇಡೀ ಜಗತ್ತೇ ನಮ್ಮ ಭಾರತದತ್ತ ಮುಖ ಮಾಡಿದೆ. ಇಡೀ ದೇಶವೇ ಹೆಮ್ಮೆಪಡುವ ಕೆಲಸವನ್ನು ಪ್ರಧಾನಿ ನರೇಂದ್ರ ಮೋದಿಯವರು ಮಾಡಿದ್ದಾರೆ. ದೀಪಾವಳಿ ಹಬ್ಬದಂತೆ ದೇಶದ ಜನರು ಶ್ರೀರಾಮನ ಉತ್ಸವವನ್ನು ಅತೀ ವಿಜೃಂಭಣೆಯಿಂದ ಮಾಡುತ್ತಿದ್ದಾರೆ ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಶ್ಲಾಘನೆ ವ್ಯಕ್ತಪಡಿಸಿದರು.

ಅಯೋಧ್ಯೆಯಲ್ಲಿ ಶ್ರೀ ರಾಮ ಲಲ್ಲಾ ದೇಗುಲದ ಲೋಕಾರ್ಪಣೆ ಆಗಿ ಬಾಲರಾಮನ ಮೂರ್ತಿಗೆ ಪ್ರಾಣ ಪ್ರತಿಷ್ಠೆ ಆಗುವ ಸಮಯದಲ್ಲಿ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ತಾಲ್ಲೂಕಿನ ಸಂಗನಕೇರಿ ಪಟ್ಟಣದ ಬಲಭೀಮ ದೇವಸ್ಥಾನದಲ್ಲಿ ಪೂಜೆಗೆ ಅಣಿಯಾದರು. ರಾಮ ಭಕ್ತರಿಂದ ಜಯ ಶ್ರೀ ರಾಮ ಘೋಷಣೆಗಳು ಮೊಳಗಿದವು.

ನಂತರ ಕಲ್ಲೋಳಿ ಪಟ್ಟಣದ ಮಾರುತಿ ದೇವಸ್ಥಾನಕ್ಕೆ ತೆರಳಿದ ಅವರು, ಬಸ್ ನಿಲ್ದಾಣದ ಹತ್ತಿರ ಅಯೋಧ್ಯೆ ಮಾದರಿಯಲ್ಲಿ ನಿರ್ಮಿಸಲಾಗಿರುವ ರಾಮನ ಮಂಟಪಕ್ಕೆ ತೆರಳಿ ವಿಶೇಷ ಪೂಜೆ ಸಲ್ಲಿಸಿದರು. ರಾಮ ಮಂದಿರಕ್ಕೆ ತೆರಳಿ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಸಮಾಜ ಬಾಂಧವರಿಂದ ಸತ್ಕಾರ ಸ್ವೀಕರಿಸಿದರು.

ಸಿಎ ಸೈದಪ್ಪ ಗದಾಡಿ, ಸುಭಾಸ ಕುರಬೇಟ, ಬಸವಂತ ದಾಸನವರ, ಮಲ್ಲಪ್ಪ ಹೆಬ್ಬಾಳ, ವಸಂತ ತಹಶೀಲ್ದಾರ, ಸದಾಶಿವ ಕಲಾಲ, ದತ್ತು ಕಲಾಲ, ಮನೋಹರ ಕಲಾಲ, ಮಹಾದೇವ ಮದಭಾವಿ, ರಾಮಣ್ಣ ಹಡಗಿನಾಳ, ಭೀಮಶಿ ಗೋರೋಶಿ, ರಮೇಶ ಕಲಾಲ, ಸಿದ್ದು ಉಳ್ಳಾಗಡ್ಡಿ, ಶ್ರೀಕಾಂತ ಸವಸುದ್ದಿ, ಆನಂದ ಕಲಾಲ, ಮೋಹನ ಗಾಡಿವಡ್ಡರ, ಅಶೋಕ ಮಕ್ಕಳಗೇರಿ, ಬಸವರಾಜ ಮಾಳೆದವರ, ಭೀಮಶಿ ಮಾಳೇದವರ, ರಮೇಶ ಸಂಪಗಾಂವಿ, ಹಣಮಂತ ಚಿಪ್ಪಲಕಟ್ಟಿ, ನಾರಾಯಣ ಉಪ್ಪಾರಟ್ಟಿ, ಲೋಹಿತ ಕಲಾಲ, ಸುರೇಶ ಕಬ್ಬೂರ, ಪಟ್ಟಣ ಪಂಚಾಯತಿ ಸದಸ್ಯರು, ಪ್ರಮುಖರು, ಸಂಘ ಪರಿವಾರದ ಸದಸ್ಯರು, ಬಿಜೆಪಿ ಕಾರ್ಯಕರ್ತರು ಸೇರಿದಂತೆ ಅನೇಕರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಕೆಮಿಕಲ್ ಗ್ಯಾಸ್ ಸೋರಿಕೆ: ಇಬ್ಬರು ಸಾವು



ಬೀದರ್: ಕೆಮಿಕಲ್ ಗ್ಯಾಸ್ ಸೋರಿಕೆಯಾಗಿ ಇಬ್ಬರು ಸಾವನ್ನಪ್ಪಿರುವ ಘಟನೆ ಜಿಲ್ಲೆಯ ಹುಮನಾಬಾದ್ ಪಟ್ಟಣದ ಹೊರವಲಯದ ಶ್ರೀಪ್ರಸನ್ನ ಪ್ರೀ ಪ್ರೋಸೆಸಿಂಗ್ ಲಿಮಿಟೆಡ್ ಕಂಪನಿಯಲ್ಲಿ ನಡೆದಿದೆ.

ತಾಲೂಕಿನ ವಡ್ಡನಕೇರಾ ಗ್ರಾಮದ ಮಹ್ಮದ್ ಶಾಬಾದ್ (21), ಮಧ್ಯಪ್ರದೇಶ ಮೂಲದ ಇಂದ್ರಜಿತ್ ಮೃತಪಟ್ಟ ವ್ಯಕ್ತಿಗಳು. ಇವರು ಕೈಗಾರಿಕಾ ಪ್ರದೇಶದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವಾಗ ಕೆಮಿಕಲ್ ಗ್ಯಾಸ್ ಸೋರಿಕೆಯಾಗಿದೆ. ಇದನ್ನು ಅರಿವಿಲ್ಲದೇ ಸೇವನೆ ಮಾಡಿದ್ದರಿಂದ ಸಾವನ್ನಪ್ಪಿದ್ದಾರೆ.

ಮಾಹಿತಿ ತಿಳಿಯುತ್ತಿದ್ದಂತೆ ಆಸ್ಪತ್ರೆ ಬಳಿ ನೂರಾರು ಜನರು ಜಮಾವಣೆಗೊಂಡು ಗಲಾಟೆ ಮಾಡುತ್ತಿದ್ದರು. ಆದರೆ ಪೊಲೀಸರ ಮಧ್ಯೆ ಪ್ರವೇಶದಿಂದ ಪರಿಸ್ಥಿತಿ ತಿಳಿಗೊಳಿಸಲಾಯಿತು.

ಸ್ಥಳಕ್ಕೆ ಶಾಸಕ ಸಿದ್ದು ಪಾಟೀಲ್, ಡಿಸಿ ಗೋವಿಂದ್ ರೆಡ್ಡಿ, ಎಸ್ಪಿ ಚನ್ನಬಸವಣ್ಣ ಭೇಟಿ ನೀಡಿ ಪರಿಶೀಲನೆ ನಡೆಸಿದರು.

# ತಮಿಳ್ ತಲೈವಾಸ್ ವಿರುದ್ಧ ಮಂಡಿಯೂರಿದ ಬೆಂಗಳೂರು



ಹೈದರಾಬಾದ್: ರೈಡಿಂಗ್‌ನಲ್ಲಿ ಹಲವು ಅವಕಾಶ ಕಳೆದುಕೊಂಡ ಬೆಂಗಳೂರು ಬುಲ್ಸ್ ತಂಡವು ರವಿವಾರ ನಡೆದ ಪ್ರೊ ಕಬಡ್ಡಿ 10ನೇ ಅವೃತ್ತಿಯ ಪಂದ್ಯದಲ್ಲಿ ತಮಿಳ್ ತಲೈವಾಸ್ ವಿರುದ್ಧ 28–45 ಅಂಕಗಳಿಂದ ಭಾರೀ ಸೋಲನ್ನು ಕಂಡಿದೆ.ದಿನದ ಇನ್ನೊಂದು ಪಂದ್ಯದಲ್ಲಿ ಪುನೇರಿ ಪಲ್ಟಾನ್ಸ್ ತಂಡವು ಗುಜರಾತ್ ಜೈಂಟ್ಸ್ ತಂಡವನ್ನು 34–24 ಅಂಕಗಳಿಂದ ಸೋಲಿಸಿತು.

ಪುನೇರಿ ಆಲ್‌ರೌಂಡ್ ಆಟ ಪ್ರದರ್ಶಿಸಿ ಗುಜರಾತ್ ವಿರುದ್ಧ ಜಯ ಸಾಧಿಸಿತು. ಆಡಿದ 13 ಪಂದ್ಯಗಳಲ್ಲಿ ಇದು ಪುನೇರಿ ತಂಡದ 11ನೇ ಗೆಲುವು ಆಗಿದ್ದು ತನ್ನ ಅಂಕ ಗಳಿಕೆಯನ್ನು 57ಕ್ಕೇರಿಸಿದ್ದು ಅಗ್ರಸ್ಥಾನಿ ಜೈಪುರಕ್ಕಿಂತ ಒಂದಂಕ ಹಿನ್ನೆಡೆಯಲ್ಲಿದೆ.

ತಮಿಳ್ ತಲೈವಾಸ್ ಈ ಆವೃತ್ತಿಯಲ್ಲಿ ಸಾಧಾರಣ ನಿರ್ವಹಣೆ ನೀಡಿದ ತಂಡವಾಗಿತ್ತು. ಆಡಿದ 13 ಪಂದ್ಯಗಳಲ್ಲಿ ಕೇವಲ ನಾಲ್ಕರಲ್ಲಿ ಜಯ ಸಾಧಿಸಿತ್ತು. ಆದರೆ ರವಿವಾರ ತಮಿಳ್ ರೈಡಿಂಗ್ ಮತ್ತು ಟ್ಯಾಕಲ್‌ನಲ್ಲಿ ಅಮೋಘ ನಿರ್ವಹಣೆ ನೀಡಿ ಬೆಂಗಳೂರು ತಂಡವನ್ನು ಬಗ್ಗುಬಡಿಯಿತು. ಬುಲ್ಸ್ ಆಟಗಾರರನ್ನು ಹಿಡಿದು ದೊಡ್ಡ ಹೊಡೆತ ನೀಡಿತು. ನರೇಂದರ್ ಮತ್ತು ಅಜಿಂಕ್ಯ ಪವಾರ್ ರೈಡಿಂಗ್‌ನಲ್ಲಿ ಮಿಂಚಿದರು.

ಸೋಮವಾರ ನಡೆಯುವ ಪಂದ್ಯ ಗಳಲ್ಲಿ ಅಂಕಪಟ್ಟಿಯಲ್ಲಿ ಅಗ್ರಸ್ಥಾನ ದಲ್ಲಿರುವ ಜೈಪುರ ಪಿಂಕ್ ಪ್ಯಾಂಥರ್ ತಂಡವು ಬೆಂಗಾಲ್ ವಾರಿಯರ್ ತಂಡವನ್ನು ಎದುರಿಸಲಿದೆ. ದಿನದ ಇನ್ನೊಂದು ಪಂದ್ಯವು ತೆಲುಗು ಟೈಟಾನ್ಸ್ ಮತ್ತು ಹರಿಯಾಣ ಸ್ಟೀಲರ್ ನಡುವೆ ನಡೆಯಲಿದೆ.

# ಬೆಂಗಳೂರಿನಲ್ಲಿ ಆರೋಗ್ಯ ಕ್ಷೇತ್ರದಲ್ಲಿ ಎಐ ತಂತ್ರಜ್ಞಾನ ಅಳವಡಿಕೆಯ ಸಂಶೋಧನಾ ಸಂಸ್ಥೆ ವಿಜ್ಜಿಯ ನೂತನ ಕಚೇರಿ ಉದ್ಘಾಟನೆ

ಬೆಂಗಳೂರು: ಜೀವನಶೈಲಿ ರೋಗಗಳ ನಿರ್ವಹಣೆ ಮತ್ತು ವೈಯಕ್ತಿಕ ಚಿಕಿತ್ಸಾ ವಿಧಾನವನ್ನ ಅಭಿವೃದ್ದಿಗೊಳಿಸುವ ನಿಟ್ಟಿನಲ್ಲಿ ಕೃತಕ ಬುದ್ದಿಮತ್ತೆ (ಎಐ) ತಂತ್ರಜ್ಞಾನ ಬಹಳಷ್ಟು ಮಹತ್ವದ ಪಾತ್ರವಹಿಸಲಿದೆ. ಈ ಬಗ್ಗೆ ದೇಶದ ಪ್ರಮುಖ ಶೈಕ್ಷಣಿಕ ಸಂಸ್ಥೆಗಳಾದ ಐಐಟಿ ಮುಂಬಯಿ ಸೇರಿದಂತೆ ಅಮೇರಿಕಾದ ಅತ್ಯುನ್ನತ ವಿಶ್ವವಿದ್ಯಾಲಯಗಳಲ್ಲಿ ಸಂಶೋಧನೆಗೆ ಹೂಡಿಕೆ ಮಾಡಲಾಗಿದೆ ಎಂದು ವಿಜ್ಜಿ ಸಂಸ್ಥೆಯ ಸಂಸ್ಥಾಪಕರು ಹಾಗೂ ವ್ಯವಸ್ಥಾಪಕ ನಿರ್ದೇಶಕರಾದ ಡಾ. ವಿಷ್ಣುವರ್ಧನ್ ತಿಳಿಸಿದರು.

ನೂತನ ಕಚೇರಿಗೆ ಚಾಲನೆ ನೀಡಿ ಅವರು ಮಾತನಾಡಿದರು. ಕೃತಕ ಬುದ್ದಿಮತ್ತೆಯನ್ನ ಬಳಸಿಕೊಂಡು ಜೀವನಶೈಲಿ ಹಾಗೂ




ವೈಯಕ್ತಿಕ ಚಿಕಿತ್ಸಾ ವಿಧಾನವನ್ನ ಅಭಿವೃದ್ದಿಗೊಳಿಸುವ ನಿಟ್ಟಿನಲ್ಲಿ ಅನೇಕ ಸಂಶೋಧನೆಗಳು ನಡೆಯುತ್ತಿವೆ. ಈ ಸಂಶೋಧನೆಗಳು ಹಾಗೂ ಜಾಗತಿಕ ಪ್ರಯತ್ನದ ಅನ್ವೇಷಣೆಯ ಪ್ರಮುಖ ಭಾಗವಾಗುವ ಹಿನ್ನಲೆಯಲ್ಲಿ ನಮ್ಮ ಸಂಸ್ಥೆ ವಿಜ್ಜಿ ಭಾರತದ ಪ್ರಮುಖ ಶೈಕ್ಷಣಿಕ ಸಂಸ್ಥೆಗಳಾದ ಐಐಟಿ ಮುಂಬಯಿ ಸೇರಿದಂತೆ ಅಮೇರಿಕಾದ ಹಲವಾರು ವಿಶ್ವವಿದ್ಯಾನಿಲಯಗಳಲ್ಲಿ ಹೂಡಿಕೆ ಮಾಡಿದೆ. ಮೂಲತಃ ಬಳ್ಳಾರಿಯವರಾಗಿರುವ ನಾವುಗಳ ರಾಜ್ಯದಲ್ಲಿ ಉದ್ಯೋಗಾವಕಾಶಗಳನ್ನ ಹೆಚ್ಚಿಸುವ ನಿಟ್ಟಿನಲ್ಲಿ ಹೂಡಿಕೆಯನ್ನ ಮಾಡಿದ್ದು ಇಂದು ಬೆಂಗಳೂರಿನಲ್ಲಿ ನೂತನ ಕಚೇರಿಯನ್ನ ಪ್ರಾರಂಭಿಸಿದ್ದೇವೆ. ಮುಂದಿನ ದಿನಗಳಲ್ಲಿ ಸಂಶೋಧನಾ ಕೇಂದ್ರಗಳನ್ನು ಪ್ರಾರಂಭಿಸುವ ಮೂಲಕ 500 ಕ್ಕೂ ಹೆಚ್ಚು ಉದ್ಯೋಗಾವಕಾಶ ಗಳನ್ನ ಸೃಷ್ಟಿಸಲಿದ್ದೇವೆ. ಅಯೋಧ್ಯೆ ರಾಮಲಲ್ಲಾನ ಪ್ರಾಣಪ್ರತಿಷ್ಠಾಪನೆಯ ಶುಭ ಸಂಧರ್ಭದಲ್ಲಿ ನೂತನ ಕಚೇರಿಯನ್ನು ಪ್ರಾರಂಭಿಸುವುದು ಬಹಳ ಸಂತಸದ ವಿಷಯ ಎಂದರು.

ಕಾರ್ಯಕ್ರಮದಲ್ಲಿ ಕೃಷ್ಣ ಇನ್ಸಿಟ್ಯೂಟ್ ಆಫ್ ಮೆಡಿಕಲ್ ಸೈನ್ಸ್ ನ ಸಂಸ್ಥಾಪಕ ಅಧ್ಯಕ್ಷರು ಹಾಗೂ ವ್ಯವಸ್ಥಾಪಕ ನಿರ್ದೇಶಕರಾದ ಡಾ. ಭಾಸ್ಕರ್ ರಾವ್ ಬೊಲ್ಲಿನೇನಿ ಹಾಗೂ ಅಮೇರಿಕಾದ ಪಿಟ್ಸ್‌ಬರ್ಗ್ ವೈದ್ಯಕೀಯ ವಿಶ್ವವಿದ್ಯಾಲಯದ ಹಿರಿಯ ಉಪಕುಲಪತಿ ಡಾ. ಅನಂತ ಶೇಖರ್ ಭಾಗಿಯಾಗಿದ್ದರು.

# ಪ್ರೀತಿಸಿ ಮದುವೆಯಾದ ಜೋಡಿ: ಕೌಟುಂಬಿಕ ಕಲಹದಿಂದ ಪತ್ನಿ ನೇಣಿಗೆ ಶರಣು



ರಾಮನಗರ: ಕೌಟುಂಬಿಕ ಕಲಹ ಉಂಟಾಗಿ, ಮಹಿಳೆಯೊಬ್ಬಳು ನೇಣಿಗೆ ಶರಣಾದ ಘಟನೆ ಮಂಡ್ಯ ನೆಹರೂನಗರದ ಪೂರ್ವ ಬಡಾವಣೆಯಲ್ಲಿ ನಡೆದಿದೆ.

ಪದ್ಮ(36) ಮೃತ ಮಹಿಳೆ. ಇನ್ನ ಇದು ಆತ್ಮಹತ್ಯೆಯಲ್ಲ ಕೊಲೆ ಅಂತಾ ಮೃತ ಮಹಿಳೆಯ ಕುಟುಂಬಸ್ಥರು ಆರೋಪಿಸಿದ್ದಾರೆ. ಮೃತ ಮಹಿಳೆ ಪದ್ಮ ಪತಿ ಸಿದ್ದರಾಜು ಎಂಬಾತನ ಮೇಲೆ ಕುಟುಂಬಸ್ಥರು ಗಂಭೀರ ಆರೋಪ ಮಾಡಿದ್ದಾರೆ.

ಅಂದಹಾಗೆ ರಾಮನಗರ ತಾಲೂಕಿನ ಅಂಕನಹಳ್ಳಿ ನಿವಾಸಿಯಾಗಿದ್ದ ಪದ್ಮ ಹಾಗೂ ಮಂಡ್ಯ ಮೂಲದ ಸಿದ್ದರಾಜು ನಡುವೆ ಪ್ರೀತಿ ಉಂಟಾಗಿ 13 ವರ್ಷದ ಕೆಳಗೆ ಪ್ರೀತಿಸಿ ಮದುವೆಯಾಗಿದ್ದರು. ಇಬ್ಬರು ಮುದ್ದಾದ ಮಕ್ಕಳು ಸಹ ಇವೆ.

ಆದರೆ ಆನಂತರ ಹಣಕ್ಕಾಗಿ ಸಿದ್ದರಾಜು ಎಂಬಾತ ಸಾಕಷ್ಟು ಪೀಡಿಸುತ್ತಿದ್ದನಂತೆ. ಆಗಾಗ ಗಲಾಟೆ ಸಹ ನಡೆಯುತ್ತಿತ್ತು. ಹಲವು ಬಾರಿ ಹಲ್ಲೆ ಕೂಡ ನಡೆಸಿದ್ದನಂತೆ. ಹೀಗಾಗಿಯೇ ಇದರಿಂದ ಮನನೊಂದು ಪದ್ಮ ಆತ್ಮಹತ್ಯೆಗೆ ಶರಣಾಗಿದ್ದಾಳೆ. ಈ ಮಧ್ಯೆ ಕುಟುಂಬಸ್ಥರು ಮಾತ್ರ ಪತಿ ಸಿದ್ದರಾಜುನೇ ಕೊಲೆ ಮಾಡಿ ನೇಣು ಹಾಕಿದ್ದಾನೆ ಎನ್ನುತ್ತಿದ್ದಾರೆ.


# ಅಟಲ್ ಸೇತುವೆಯಲ್ಲಿ ಮೊದಲ ಅಪಘಾತ



ಬೆಂಗಳೂರು: ಜ. 12 ರಂದು ಲೋಕಾರ್ಪಣೆಗೊಂಡ ಜನಪ್ರಿಯ, ದೇಶದ ಅತಿ ಉದ್ದನೆಯ ಸಮುದ್ರ ಸೇತುವೆ ಅಟಲ್ ಸೇತುಯಲ್ಲಿ ಭೀಕರ ಅಪಘಾತ ಸಂಭವಿಸಿದೆ. ನಿಯಂತ್ರಣ ತಪ್ಪಿದ ಕಾರು ಡಿವೈಡರ್ಗೆ ಹೋಗಿ ಗುದ್ದಿ ಪಲ್ಟಿಯಾಗಿದೆ. ಇಬ್ಬರು ಮಹಿಳೆಯರು, ಮೂವರು ಮಕ್ಕಳು ಸೇರಿ ಐವರು ಗಾಯಗೊಂಡಿದ್ದು, ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಅಟಲ್ ಬಿಹಾರಿ ವಾಜಪೇಯಿ ಸೇತುವೆಯಲ್ಲಿ ನಡೆದ ಅಪಘಾತ ಇದಾಗಿದೆ. ನವ ಮುಂಬೈಗೆ ಸಂಪರ್ಕ ಕಲ್ಪಿಸುವ ಈ ಸೇತುವೆಯನ್ನು ಪ್ರಧಾನಿ ನರೇಂದ್ರ ಮೋದಿ ಜನವರಿ 12 ರಂದು ಲೋಕಾರ್ಪಣೆ ಮಾಡಿದ್ದರು. ಅಪಘಾತದ ದೃಶ್ಯ ಕ್ಯಾಮೆರಾದಲ್ಲಿ ಸೆರೆಯಾಗಿದೆ. ನಿಯಂತ್ರಣ ತಪ್ಪಿದ ಕಾರು ಡಿವೈಡರ್ಗೆ ಡಿಕ್ಕಿಯಾಗಿ ಪಲ್ಟಿ ಹೊಡೆಯುತ್ತ ಮುಂದೆ ಹೋಗಿದೆ. ಕೊನೆಗೆ ಮತ್ತೆ ಡಿವೈಡರ್ಗೆ ಡಿಕ್ಕಿಯಾಗಿ ನಿಂತಿದೆ. ಕಾರಿನಲ್ಲಿ ಇಬ್ಬರು ಮಹಿಳೆಯರು ಮೂವರು ಮಕ್ಕಳು ಪ್ರಯಾಣ ಮಾಡುತ್ತಿದ್ದರು. ಮಾರುತಿ ಕಾರಿನಲ್ಲಿ ಚಿರ್ಲೆಯಿಂದ ಮುಂಬೈಗೆ ಹೋಗುತ್ತಿದ್ದರು ಎಂದು ತಿಳಿದುಬಂದಿದೆ.

# ಪ್ರಭು ಶ್ರೀ ರಾಮದೇವರ ಪ್ರಾಣ ಪ್ರತಿಷ್ಠೆ: ಬೆಳಗಾವಿಯಲ್ಲಿ ಅದ್ದೂರಿ ವಿಜ್ರಂಬನೆ

ಬೆಳಗಾವಿ: ಅಯೋಧ್ಯೆಯಲ್ಲಿ ಭವ್ಯ ರಾಮಮಂದಿರ ನಿರ್ಮಾಣವಾಗಿ ಪ್ರಭು ಶ್ರೀ ರಾಮದೇವರ ಪ್ರಾಣ ಪ್ರತಿಷ್ಠೆ ಹಿನ್ನಲೆಯಲ್ಲಿ ಮಾಜಿ ಶಾಸಕ ಅನಿಲ ಬೆನಕೆ ಚವ್ಹಾಟಗಲ್ಲಿ ಜಾಲಗಾರ ಮಾರುತಿ ಮಂದಿರದಲ್ಲಿ ವಿಶೇಷ ಪೂಜೆ ನೆರವೇರಿಸಿ ನಂತರ ಧರ್ಮವೀರ ಛತ್ರಪತಿ ಶ್ರೀ ಸಂಭಾಜಿ ಮಹಾರಾಜರ ಮೂರ್ತಿಗೆ ಮಾಲಾರ್ಪಣೆ ಮಾಡಿ ಹೇಮು ಕಲ್ಯಾನಿ ಚೌಕನಲ್ಲಿ ಆಯೋಜಿಸಲಾದ ಅಯೋಧ್ಯೆಯಿಂದ ಶ್ರೀ ರಾಮನ ಪ್ರಾಣ ಪ್ರತಿಷ್ಠೆ ಸಮಾರಂಭದ ನೇರ ಪ್ರಸಾರ ಭಕ್ತರೊಂದಿಗೆ ವಿಕ್ಷಿಸಿದರು.



ಈ ಸಂದರ್ಭದಲ್ಲಿ ಮಾಜಿ ಶಾಸಕ ಅನಿಲ ಬೆನಕೆ ಮಾತನಾಡುತ್ತಾ ಒಂದೂವರೆ ಶತಕೋಟಿ ಭಾರತೀಯರ ಶತ ಶತಮಾನಗಳ ಕನಸು ನನಸಾಗಿದೆ. ಅಸಂಖ್ಯಾತಕಾರ ಸೇವಕರ ಹೋರಾಟ. ತ್ಯಾಗ–ಬಲಿದಾನದ ಫಲ ಸಾಕಾರವಾಗಿದೆ. ಅಯೋಧ್ಯೆಯಲ್ಲಿ ಭವ್ಯ ರಾಮಮಂದಿರ ನಿರ್ಮಾಣವಾಗಿ ಶ್ರೀ ಬಾಲರಾಮ ದೇವರ ಪ್ರಾಣ ಪ್ರತಿಷ್ಠೆ ಪ್ರಧಾನಿಗಳಾದ ಮಾನ್ಯ ಶ್ರೀ ನರೇಂದ್ರ ಮೋದಿಜಿ ಅವರ ನೇತೃತ್ವದಲ್ಲಿ ನೆರವೇರಿತು. ಎಲ್ಲಕರ ಸೇವಕರನ್ನು ಸ್ಮರಿಸುತ್ತಾ, ಈ ಸುಸಂದರ್ಭದಲ್ಲಿ ಸಮಸ್ತ ರಾಮಭಕ್ತರಿಗೆ ಶುಭಾಶಯಗಳನ್ನು ಕೋರುತ್ತೇನೆ. ಪ್ರತಿಯೊಬ್ಬರಿಗೂ ಆ ರಾಮದೇವರು ಸುಖ–ಶಾಂತಿ, ನೆಮ್ಮದಿ–ಸಮೃದ್ದಿಯನ್ನುಕರುಣಿಸಲಿ ಎಂದುಭಕ್ತಿ ಪೂರ್ವಕವಾಗಿ ಪ್ರಾರ್ಥಿಸುತ್ತೇನೆಎಂದು ತಿಳಿಸಿದರು.

# ಕೆಎಲ್‌ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯಲ್ಲಿ ನೂತನವಾಗಿ "ಸ್ಪೆಷ್ಯಾಲಿಟಿ ಕ್ಲಿನಿಕ್"ನ ಉದ್ಘಾಟನೆ

ಬೆಳಗಾವಿ ನಗರದಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ಜನರೆಲ್ ಮೆಡಿಸಿನ್ ವಿಭಾಗದ ವತಿಯಿಂದ ಸ್ಪೆಷ್ಯಾಲಿಟಿ ಕ್ಲಿನಿಕ ಅನ್ನು ಯಶಸ್ವಿಯಾಗಿ ಪ್ರಾರಂಬಿಸಲಾಯಿತು. ಕ್ಲಿನಿಕ್‌ಅನ್ನು ಉದ್ಘಾಟಿಸಿ ಮಾತನಾಡಿದ ಆಸ್ಪತ್ರೆಯ ನಿರ್ದೇಶಕರಾದ ಡಾ.ಎಸ್ ಸಿ ಧಾರವಾಡ ಅವರು ಸಾರ್ವಜನಿಕರ ಹಿತಾಸಕ್ತಿಯನ್ನು ಮನಗಂಡು ನೂತನವಾಗಿ ಸ್ಪೆಷ್ಯಾಲಿಟಿ ಕ್ಲಿನಿಕ್ ನ್ನು ಪ್ರಾರಂಬಿಸಲಾಗುತ್ತಿದ್ದು ಪ್ರಸ್ತುತವಾಗಿ ಆಸ್ಪತ್ರೆಯಲ್ಲಿ ಒದಗಿಸುತ್ತಿರುವ ವೈದ್ಯಕೀಯ ಸೇವೆಗಳ ಜೊತೆಗೆ ಸದರಿಕ್ಲಿನಿಕ್ ನಲ್ಲಿ ಪ್ರತಿ ಸೋಮವಾರ ಬೆಳಿಗ್ಗೆ 9 ರಿಂದ ಮದ್ಯಾಹ್ನ 1 ವರೆಗೆಹೆಡೇಕ್‌ಕ್ಲಿನಿಕ್ (ತಲೆನೋವುಕ್ಲಿನಿಕ್), ಪ್ರತಿ ಮಂಗಳವಾರ ಬೆಳಿಗ್ಗ 9 ರಿಂದ ಮದ್ಯಾಹ್ನ 1ವರೆಗೆ ಅಸ್ತಮಾಕ್ಲಿನಿಕ್ ಹಾಗೂ ಪ್ರತಿ ಬುಧವಾರ ಬೆಳಿಗ್ಗೆ 9 ರಿಂದ ಮದ್ಯಾಹ್ನ 1 ರವರೆಗೆ ರಕ್ತ ಹೀನತೆಕ್ಲಿನಿಕ್ ಗಳು ಕಾರ್ಯ ನಿರ್ವಹಿಸಲಿದ್ದು ಸದರಿ ವಿಶೇಷ ಕ್ಲಿನಿಕ್‌ಗಳಲ್ಲಿ ನುರಿತ ತಜ್ಞ ವೈದ್ಯರಿಂದ ತಪಾಸಣೆ ಮಾಡಲಾಗುವದು ಹಾಗೂ ಈ ಕ್ಲಿನಿಕ್ ನ ಅಡಿಯಲ್ಲಿ ಚಿಕಿತ್ಸೆಯನ್ನು ಬಯಸುವ ರೋಗಿಗಳಿಗೆ ರಿಯಾಯತಿದರದಲ್ಲಿ ಪ್ರಯೋಗಾಲಯದ ಸೇವೆಯನ್ನು ನೀಡಲಾಗುತ್ತಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡಿಸಿ



ಕೊಳ್ಳಬೇಕೆಂದು ಸೂಚಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜನರಲ್ ಮೆಡಿಸಿನ್ ವಿಭಾಗದ ಮುಖ್ಯಸ್ಥರಾದ ಡಾ. ಶ್ರೀನಿವಾಸ ಬಿ ಅವರು, ತಲೆನೋವುತೀ ರಾಸಾಮಾನ್ಯ ವೆಂಬಂತೆ ತೋರಬಹುದು, ಆದರೆಇದಕ್ಕೆ ಸಂಬಂದಿಸಿದಂತೆ ತಲೆನೋವಿಗೆದೃಷ್ಟಿಗೆ ಸಂಬಂದಿಸಿದಂತೆ, ಮೆದುಳಿನ ಸಮಸ್ಯೆಗಳು, ಪಿತ್ತ, ಕಫ ಹೀಗೆ ಬೇರೆ ಬೇರೆ ಕಾರಣಗಳಿರಬಹುದಾಗಿದೆ ಅವುಗಳನ್ನು ಸಾಮಾನ್ಯರೋಗಗಳಿಂದ ಪ್ರತ್ಯೇಕಿಸಿ ಚಿಕಿತ್ಸೆ ನೀಡುವುದೇ ಈ ಕ್ಲಿನಿಕ್ ನ ಮುಖ್ಯ ಉದ್ದೇಶವಾಗಿದೆ. ಅದೇ ರೀತಿ ಅಸ್ಥಮಾ ಹಾಗೂ ರಕ್ತಹೀನತೆಗಳು ಕಂಡು ಬಂದರೂ ಅವುಗಳನ್ನು ಉಪಚರಿಸಲು ವಿಶೇಷ ಚಿಕಿತ್ಸಾ ಮಾದರಿಗಳು ಮೂಲಕ ವಿಶೇಷಜ್ಞರ ಮುತುವರ್ಜಿಯಲ್ಲಿ ನಿರ್ವಹಿಸಲಾಗುವುದು ಎಂದು ಕ್ಲಿನಿಕ್ ನ ಕಾರ್ಯವೈಖರಿಯನ್ನು ತಿಳಿಸಿದರು.

ಈ ಉದ್ಘಾಟನೆ ಕಾರ್ಯಕ್ರಮದಲ್ಲಿ ಮೆಡಿಸಿನ್ ವಿಭಾಗದ ಮುಖ್ಯಸ್ಥರಾದ ಡಾ.ಶ್ರಿನಿವಾಸ ಬಿ, ಡಾ.ಸೌರಭ ಹಿರೇಮಠ, ಡಾ.ಶ್ರೀಕಾಂತ ಮೇತ್ರಿ, ಡಾ. ವಿರೇಂದ್ರಇಪ್ಪಗಿ, ಇನ್ನುಳಿದಂತೆ ಚಿಕ್ಕ ಮಕ್ಕಳ ವಿಭಾಗದ ಮುಖ್ಯಸ್ಥರಾದ ಡಾ. ಎಮ್.ಎಸ್‌ಕಡ್ಡಿ, ಇನ್ನುಳಿದ ತಜ್ಞರಾದಡಾ. ಸೌಮ್ಯ ವೆರ್ಣೇಕರ, ಡಾ.ಬಸವರಾಜ ಕೆ ಹಾಗೂ ಡಾ.ಯೊಗೇಶ ರಾವಳ,ಕಿವಿ ಗಂಟಲು ಮೂಗು ವಿಭಾಗದ ಹೆಸರಾಂತ ತಜ್ಞರಾದ ಡಾ. ವಿವೇಕಾನಂದ ಕೊಳ್ವೆಕರ ಹಾಗೂ ಇನ್ನುಳಿದಂತೆ ಆಸ್ಪತ್ರೆಯಎಲ್ಲ ವಿಭಾಗದ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಈ ಕ್ಲಿನಿಕ್ ನ ಸೇವೆಗಳ ಹೆಚ್ಚಿನಮಾಹಿತಿಗಾಗಿ 8550887777, 7483377256 ಮೊಬೈಲ್ ಸಂಖ್ಯೆಗಳ ಸಂಪರ್ಕಿಸಲು ಕೋರಲಾಗಿದೆ.

VOL. 04 ISSUE. 298 RNI. KARKAN/2020/79084 REG.NO G-2/PMG/KA/NK/BM/139/2024-26

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089